ಸಂಪುಟ : 9 ಸಂಚಿಕೆ 49 ಪುಟ : 4 ಬೆಲೆ: 3.00 ಶುಕ್ರವಾರ ಮಾರ್ಚ್ 22 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

WALK IN INTERVIEW

Vacancy open

Bagalkot, Bijapur, Bidar, Kalaburgi, Mangalore, Belgaum

(Required For Bank Recovery and Collections)

- Filed collection Executive
- Two wheeler Must
- Salary up to 15000/- & Attractive Incentives Facility

Contact Number : 8310034934

Volume : 9 Issue : 49 Pages : 4 Price : 3.00 Friday March 22 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್ 22ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 2ರಲ್ಲಿ ಸೆಟ್ಲಮೆಂಟ್, ಗಾಂಧಿನಗರ, ಹನಮಂತ ದೇವರ ಗುಡಿ ಲೈನ್, ಹರಣಶಿಕಾರಿ ಓಣಿ, ಸಬ್ ಜೈಲ್ ರೋಡ್, ವೆಲ್‌ಫೇರ್ ಟೌನ್‌ಶಿಪ್, ಸ್ಲ್ಯಾಬ್ ಮನೆ ಕೆಲವು ಉಳಿದ ಭಾಗಗಳು

ವಾರ್ಡ್ ನಂ. 06ರಲ್ಲಿ ಶಿದ್ದಲಿಂಗನಗರ, ಕನ್ಯಾಳ ಅಗಸಿ, ಭಜಂತ್ರಿ ಓಣಿ, ಅಂಬೇಡ್ಕರ್ ನಗರ, ಹೂಲಿಯವರ ಲೈನ್, ಜಮಲಮ್ಮನ ಗುಡಿ ಲೈನ್, ಹಾದಿಮನಿಯವರ ಲೈನ್, ಶಿದ್ದಲಿಂಗ ನಗರದಲ್ಲಿ ಭಾಗ-1,2 ನ್ಯಾವಳ್ಳಿಯವರ ಲೈನ್, ಮಂಜುನಾಥ್ ನಗರ, ರಡ್ಡಿಯವರ ಲೈನ್, ರೊಟ್ಟಿಯವರ ಲೈನ್, ಪಿ.ಪಿ. ಗುಡಿ ಲೈನ್,

ವಾರ್ಡ್ ನಂ. 29 ರಾಜೀವಗಾಂಧಿ ನಗರ, ಪೊಲೀಸ್ ಸ್ಟೇಷನ್ ಭಾಗ, ಗಾರ್ಡನ್ ಲೈನ್, ಮಸೂತಿ ಲೈನ್, ಗುಂಪಿನ ಮನೆ, ಭಾಂಡಗೆಯವರ ಲೈನ್, ವಾರ್ಡ್ ನಂ. 5ರಲ್ಲಿ ನರಸಾಪೂರ ಆಶ್ರಯ ಕಾಲೋನಿ, ವಾರ್ಡ್ ನಂ. 26ರಲ್ಲಿ ಅಕ್ಕನ ಬಳಗ, ಕಲಾಮಂದಿರ ರೋಡ, ಗೊಡಚಿ ಖಾನಾವಳಿ ಲೈನ್, ಜೆ.ಟಿ.ಮಠದ ಲೈನ್, ಕರ್ನಾಟಕ ಟಾಕೀಸ್ ರೋಡ್, ವಾರ್ಡ್ ನಂ. 24, 26, 30ರಲ್ಲಿ 76ಪ್ಲಾಟ್, ಸಾಲಮನೆ, ಅಬ್ಬಿಗೇರಿ ಕಂಪೌಂಡ್, ಕಮ್ಮಾರ ಸಾಲ, ಮಕಾನಗಲ್ಲಿ, ಉಡಚಮ್ಮನ ಗುಡಿ ಲೈನ್, ಉರ್ದು ಶಾಲೆಯ ಹಿಂದಿನ ಕೆಲವು ಭಾಗಗಳು, ತೆಗ್ಗಿನ್ ಲಾಟ್.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸಲು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯ ಮಟ್ಟದ ವಿಚಾರ ಸಂಕಿರಣ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಸಮಾಜಕಾರ್ಯ ವಿಭಾಗವು ಆಯೋಜಿಸಿರುವ 'ಹಿರಿಯರ ಸಮಸ್ಯೆಗಳು ಮತ್ತು ಮಧ್ಯಸ್ಥಿಕೆ'ಗಳ ಕುರಿತು ಎರಡು ದಿನಗಳ ರಾಜ್ಯ ಮಟ್ಟದ ವಿಚಾರ ಸಂಕಿರಣವನ್ನು ಕೌಶಲ್ಯ ವಿಕಾಸ ಭವನ ಏಖಖಆಕಖಗ ಗದಗದಲ್ಲಿ ಶುಕ್ರವಾರ ಆಯೋಜಿಸಲಾಗಿದೆ.

ಈ ವಿಚಾರ ಸಂಕಿರಣ ಹಿರಿಯ ಜನಸಂಖ್ಯೆಯು ಎದುರಿಸುತ್ತಿರುವ ವಿವಿಧ ಸವಾಲುಗಳ ಮೇಲೆ ಬೆಳಕು ಚೆಲ್ಲುವ ಗುರಿಯನ್ನು ಹೊಂದಿದೆ ಮತ್ತು ಅವುಗಳನ್ನು ಪರಿಹರಿಸಲು ಪರಿಣಾಮಕಾರಿ ಯೋಜನೆಯನ್ನು ಹೊಂದಿರುತ್ತದೆ.

ಹಿರಿಯರ ಆರೈಕೆಗೆ ಸಂಬಂಧಿಸಿದ ವಿವಿಧ ಕ್ಷೇತ್ರಗಳಲ್ಲಿ ಪರಿಣಿತರಾದ 18 ಸಂಪನ್ಮೂಲ ವ್ಯಕ್ತಿಗಳ ವಿಶಿಷ್ಟ ಸಮಿತಿಯನ್ನು ಈ ವಿಚಾರ ಸಂಕಿರಣ ಒಳಗೊಂಡಿರುತ್ತದೆ. ಎರಡು ದಿನಗಳ ಅವಧಿಯಲ್ಲಿ ಏಳು ತಾಂತ್ರಿಕ ಸಭೆಗಳು ಮತ್ತು ಎರಡು ಪ್ಯಾನೆಲ್ ಚರ್ಚೆಗಳು ನಡೆಯಲಿವೆ. ಪಾಲ್ಗೊಳ್ಳುವವರಿಗೆ ಕಲಿಕೆ ಮತ್ತು ಸಹಯೋಗಕ್ಕಾಗಿ ಸಾಕಷ್ಟು ಅವಕಾಶಗಳನ್ನು ಒದಗಿಸಲಾಗುವುದು.

ಉದ್ಘಾಟನಾ ಸಮಾರಂಭಕ್ಕೆ ಮುಖ್ಯ ಅತಿಥಿಗಳಾಗಿ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ (ನಿಮ್ಹಾನ್ಸ್)ನ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಡಾ. ಸಿ.ಆರ್. ಚಂದ್ರಶೇಖರ್ ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ನಾಳೆ ಶ್ರೀ ರೇಣುಕಾಚಾರ್ಯ ಜಯಂತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಆದೇಶದಂತೆ ಲೋಕಸಭೆ ಚುನಾವಣಾ-2024 ರ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಶ್ರೀ ರೇಣುಕಾಚಾರ್ಯರ ಜಯಂತಿಯನ್ನು ಮಾರ್ಚ್ 23 ರಂದು ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸರಳ ಹಾಗೂ ಸಾಂಕೇತಿಕವಾಗಿ ಆಚರಣೆ ಮಾಡಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಸ್ಎಸ್ಎಲ್‌ಸಿ ಪರೀಕ್ಷಾ ಅಧೀಕ್ಷಕರು, ನಿರ್ವಹಣಾ ಸಿಬ್ಬಂದಿಗಳ ಪೂರ್ವಭಾವಿ ಸಭೆ

# ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಕಾರ್ಯ ನಿರ್ವಹಿಸಿ: ತಹಸೀಲ್ದಾರ್ ಅನಿಲ್ ಬಡಿಗೇರ್

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಮಾ.25ರಿಂದ ಆರಂಭವಾಗಲಿರುವ ಎಸ್ಎಸ್ಎಲ್‌ಸಿ ಪರೀಕ್ಷೆಗಳನ್ನು ಸುಗಮವಾಗಿ ನಡೆಸಲು ಅಗತ್ಯ ಕ್ರಮ ಕೈಕೊಳ್ಳಲಾಗಿದೆ ಎಂದು ತಹಸೀಲ್ದಾರ್ ಅನಿಲ್ ಬಡಿಗೇರ್ ಹೇಳಿದರು.

ಅವರು ಗುರುವಾರ ಶಿಕ್ಷಣ ಇಲಾಖೆ ವತಿಯಿಂದ ತಹಸೀಲ್ದಾರ ಕಚೇರಿಯಲ್ಲಿ ಪರೀಕ್ಷಾ ಅಧೀಕ್ಷಕರು ಮತ್ತು ಪರೀಕ್ಷಾ ನಿರ್ವಹಣಾ ಸಿಬ್ಬಂದಿಗಳಿಗೆ ಆಯೋಜಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಾರ್ಗಾಧಿಕಾರಿಗಳು ನಿಗದಿತ ಸಮಯದಲ್ಲಿ ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆ ಪತ್ರಿಕೆಯನ್ನು ತಲುಪಿಸಬೇಕು. ಆರೋಗ್ಯ ಸಿಬ್ಬಂದಿಯು ಎಲ್ಲ ಪರೀಕ್ಷಾ ಕೇಂದ್ರಗಳಲ್ಲಿ ಹಾಜರಿರಬೇಕು. ಗ್ರಾಮೀಣ ಪ್ರದೇಶಗಳಿಂದ ಬರುವ ವಿದ್ಯಾರ್ಥಿಗಳಿಗೆ ಸಮಯಕ್ಕೆ ಸರಿಯಾಗಿ ಬಸ್ ವ್ಯವಸ್ಥೆ ಕಲ್ಪಿಸಬೇಕೆಂದು ಡಿಪೋ ಮ್ಯಾನೇಜರ್‌ಗೆ ಸೂಚಿಸಲಾಗಿದೆ. ವಿದ್ಯಾರ್ಥಿಗಳಿಗೆ ಕುಡಿಯುವ ನೀರು ಮತ್ತು ಸಮರ್ಪಕ ಬೆಂಚ್ ಪೂರೈಸಬೇಕು ಎಂದರಲ್ಲದೆ, ಪರೀಕ್ಷಾ ಸಮಯದಲ್ಲಿ ವಿದ್ಯುತ್ ನಿಲುಗಡೆ




ಆಗದಂತೆ ಹೆಸ್ಕಾಂ ಅಧಿಕಾರಿಗೆ ಸೂಚಿಸಿದರು.

ಸೋಮವಾರ ಶಿರಹಟ್ಟಿ ಪಟ್ಟಣವೂ ಸೇರಿದಂತೆ ವಿವಿಧ ಗ್ರಾಮೀಣ ಪ್ರದೇಶಗಳಲ್ಲಿ ಹೋಳಿ ಹಬ್ಬದ ಪ್ರಯುಕ್ತ ಓಕುಳಿ (ಬಣ್ಣ ಎರಚುವದು) ಇರುವದರಿಂದ ಅಂದು ಮುಂಜಾನೆ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಯಾವುದೇ ರೀತಿಯಲ್ಲಿ ತೊಂದರೆಯಾಗದಂತೆ ಅಗತ್ಯ ಕ್ರಮ ವಹಿಸಬೇಕೆಂದು ತಹಸೀಲ್ದಾರ ಅನಿಲ ಬಡಿಗೇರ ಪೊಲೀಸ್ ಸಿಬ್ಬಂದಿಗೆ ಮೊಬೈಲ್ ಮೂಲಕ ಸೂಚನೆ ನೀಡಿದರು.

ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಪ್ರಶಾಂತರಾವ್ ಎಂ.ವಿ. ಮಾತನಾಡಿ, ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ನಿರ್ಭೀತಿಯಿಂದ ತೆರಳಬೇಕು. ಪರೀಕ್ಷೆಗೆ ಹಾಜರಾಗುವ ಎಲ್ಲ ವಿದ್ಯಾರ್ಥಿಗಳಿಗೆ ಉಚಿತ ಸಾರಿಗೆ ವ್ಯವಸ್ಥೆ ಇದ್ದು, ವಿದ್ಯಾರ್ಥಿಗಳು ತಮ್ಮ ಪ್ರವೇಶಪತ್ರವನ್ನು ತೋರಿಸಿ ಬಸ್‌ನಲ್ಲಿ ಉಚಿತವಾಗಿ ಸಂಚರಿಸಬಹುದಾಗಿದೆ. ಪರೀಕ್ಷಾ ಕಾರ್ಯಕ್ಕೆ ನಿಯೋಜನೆಯಾದ ಎಲ್ಲ ಅಧಿಕಾರಿಗಳು ಸಮಯಕ್ಕೆ ಸರಿಯಾಗಿ ಹಾಜರಾಗಿ ಪರೀಕ್ಷೆಯ ಎಲ್ಲ ಕಾರ್ಯಗಳನ್ನು ಯಶಸ್ವಿಯಾಗಿಸಬೇಕೆಂದು ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಮಂಗಳಾ ತಾಪಸ್ಕರ ಮಾತನಾಡಿ, ಶಿರಹಟ್ಟಿ ತಾಲೂಕಿನಲ್ಲಿ 6 ಪರೀಕ್ಷಾ ಕೇಂದ್ರಗಳು ಬರಲಿದ್ದು, ಇದಕ್ಕಾಗಿ 166 ಸಿಬ್ಬಂದಿ ನಿಯೋಜಿಸಲಾಗಿದೆ. ಒಟ್ಟು 1329 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಫಲಿತಾಂಶ ಸುಧಾರಣೆಗೆ ಈಗಾಗಲೇ ಇಲಾಖೆ ವತಿಯಿಂದ ಹಲವಾರು ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ. ಕಳೆದ ಬಾರಿ ಜಿಲ್ಲೆಯಲ್ಲೇ ಹೆಚ್ಚು ಫಲಿತಾಂಶ ಗಳಿಸಲಾಗಿತ್ತು. ಅದನ್ನೇ ಈ ಬಾರಿಯೂ ಸಹ ಮುಂದುವರೆಸಲು ಅಗತ್ಯ ಕ್ರಮ ಕೈಕೊಳ್ಳಲಾಗಿದೆ ಎಂದರು.

ಯು.ಜಿ. ಹುಚ್ಚಯ್ಯನಮಠ, ಹರೀಶ ಎಸ್, ತಾ.ಪಂ ಸಹಾಯಕ ನಿರ್ದೇಶಕ ಎಸ್.ಕೆ. ವಾಲಿ, ಯೋಜನಾಧಿಕಾರಿ ಎಚ್.ಎ. ಕೊಂಡಿಕೊಪ್ಪ, ಆರ್.ಎಫ್. ಬಟಗುರ್ಕಿ, ಎಚ್.ಟಿ. ಬಿಜ್ಜೂರ, ಶ್ರೀನಿವಾಸ ಲಮಾಣಿ ಮುಂತಾದವರು ಉಪಸ್ಥಿತರಿದ್ದರು.


### ಏಪ್ರಿಲ್ 1ರಿಂದ ಉದ್ಯೋಗ ಖಾತ್ರಿಯಲ್ಲಿ ಕೆಲಸ ಪ್ರಾರಂಭಿಸಿ: ಇಒ ಮಾಣಿಕರಾವ್ ಪಾಟೀಲ್

# ವಲಸೆ ಯಾಕ್ರಿ, ನಿಮ್ಮೂರಲ್ಲೆ ಉದ್ಯೋಗ ಖಾತ್ರಿ

**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಕುರ್ತಕೋಟಿ ಗ್ರಾಮ ಪಂಚಾಯಿತಿಯಲ್ಲಿ ಗುರುವಾರ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ 'ವಲಸೆ ಯಾಕ್ರೀ, ನಿಮ್ಮೂರಲ್ಲೇ ಉದ್ಯೋಗ ಖಾತ್ರಿ/ ಉದ್ಯೋಗ ಖಾತ್ರಿ ದುಡಿಮೆ ಖಾತ್ರಿ' ಅಭಿಯಾನದಡಿ ಕಾಯಕ ಬಂಧುಗಳ, ಸ್ವ-ಸಹಾಯ ಸಂಘಗಳ ಸದಸ್ಯರ ಸಭೆ ನಡೆಸಲಾಯಿತು.

ಈ ವೇಳೆ ಗದಗ ತಾ.ಪಂ ಇಒ ಮಾಣಿಕರಾವ್ ಪಾಟೀಲ್ ಮಾತನಾಡಿ, ಏಪ್ರೀಲ್ 1ರಿಂದ ಕೂಲಿಕಾರರಿಗೆ ಕೆಲಸ ನೀಡಲಾಗುತ್ತಿದ್ದು, ಕಾಯಕ ಬಂಧುಗಳು ಕೂಲಿಕಾರರಿಂದ ನಮೂನೆ 6 ಸಂಗ್ರಹಿಸಬೇಕು. ಕಳೆದ ವರ್ಷಕ್ಕಿಂತ ಈ ವರ್ಷ ಬೇಗನೆ ಕೆಲಸ ನೀಡುವ ಮೂಲಕ ಗುಳೆ ತಪ್ಪಿಸಿ ಸ್ಥಳಿಯವಾಗಿ



ಕೆಲಸ ನೀಡಲಾಗುತ್ತಿದೆ ಎಂದರು.


ಪ್ರತಿ ವರ್ಷದಂತೆ ಈ ವರ್ಷವೂ ಕೂಡಾ ಕೂಲಿಕಾರರಿಗೆ ಉದ್ಯೋಗ ಕೊಡಲಿದ್ದು, ತಾವು ತಮ್ಮ ಕೂಲಿಕಾರರ ಆಧಾರ ಸಂಖ್ಯೆಗೆ ಬ್ಯಾಂಕ್ ಖಾತೆ ಸಂಖ್ಯೆ ಲಿಂಕ್ ಹಾಗೂ ಉದ್ಯೋಗ ಚೀಟಿ NCPI ಲಿಂಕ್ ಕಡ್ಡಾಯವಾಗಿ ಮಾಡಿಸಬೇಕು. ಕೆಲಸದ ಸ್ಥಳಗಳಲ್ಲಿ ಕೂಲಿಕಾರರಿಗೆ ಪ್ರಥಮ ಚಿಕಿತ್ಸೆ, ನೆರಳು, ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗುತ್ತದೆ ಎಂದು ತಿಳಿಸಿದರು.

ಈ ಬಾರಿ ಕೂಲಿಕಾರರು ಕೆಲಸದ ಸ್ಥಳದಲ್ಲಿ ಮಕ್ಕಳನ್ನು ಕರೆತರಬಾರದು. ಅದಕ್ಕಾಗಿ ಆರು ತಿಂಗಳಿಂದ ಮೂರು ವರ್ಷದ ಮಕ್ಕಳಿಗೆ ನಮ್ಮ ಗ್ರಾ.ಪಂನಿಂದ ಕೂಸಿನ ಮನೆ ಆರಂಭಿಸಿದ್ದು, ತಮ್ಮ ಮಕ್ಕಳನ್ನು ಅಲ್ಲಿಯೇ ಬಿಟ್ಟು ಕೆಲಸಕ್ಕೆ ಹೋಗಬೇಕು ಎಂದರು.

ಸಹಾಯಕ ನಿರ್ದೇಶಕರಾದ (ಗ್ರಾಮೀಣ ಉದ್ಯೋಗ) ಕುಮಾರ್ ಪೂಜಾರ್ ಮಾತನಾಡಿ, ಕೆಲಸದ ಸ್ಥಳದಲ್ಲಿ ಕೂಲಿಕಾರರ ಹಾಜರಾತಿಯನ್ನು ಎರಡು ಹಂತದಲ್ಲಿ ಓಒಒಖ ಆ್ಯಪ್‌ನಲ್ಲಿ ಸೆರೆಹಿಡಿಯಬೇಕು. ಕೂಲಿಕಾರರಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾ.ಪಂ ಲೆಕ್ಕಧಿಕಾರಿ, ಗ್ರಾ.ಪಂ ಪಿಡಿಓ ನರೇಗಾ ಸಿಬ್ಬಂದಿಗಳು, ಕಾಯಕ ಬಂಧುಗಳು, ಸ್ವಸಹಾಯ ಸಂಘದ ಸದಸ್ಯರು, ಮತ್ತು ಪಂಚಾಯತ ಸಿಬ್ಬಂದಿಗಳು ಹಾಜರಿದ್ದರು.

## ಸ್ವೀಪ್ ಸಮಿತಿಯಿಂದ ಮತದಾರರ ಜಾಗೃತಿ




**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಾ ಸ್ವೀಪ್ ಸಮಿತಿ ವತಿಯಿಂದ ಲೋಕಸಭಾ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಅಂಗನವಾಡಿ ಕಾರ್ಯಕರ್ತೆಯರು ಗುರುವಾರ ಶಿರಹಟ್ಟಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಮತದಾರರ ಜಾಗೃತಿ ಜಾಥಾ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮೃತ್ಯುಂಜಯ ಗುಡ್ಡದಾನ್ವೇರಿ, 18 ವರ್ಷ ವಯೋಮಾನ ಮೀರಿದ ಪ್ರತಿಯೊಬ್ಬರೂ ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ಸೇರಿಸಬೇಕು. ಸಂವಿಧಾನ ನಮಗೆ ಕೊಡಮಾಡಿದ ಮತದಾನದ ಹಕ್ಕನ್ನು ಪ್ರತಿಯೊಬ್ಬ ಮತದಾರರು ಚಲಾಯಿಸಬೇಕು. ಮತದಾರರ ಸಹಾಯವಾಣಿ 1950ಗೆ ಕರೆ ಮಾಡಿ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದಾಗಿದೆ ಎಂದರು.

ತಾ.ಪಂ ಸಹಾಯಕ ನಿರ್ದೇಶಕ ಎಸ್.ಕೆ. ವಾಲಿ, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಚುನಾವಣಾ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಕೆಎಸ್‌ಆರ್‌ಟಿಸಿ ಬಸ್ ಪಲ್ಟಿ: 8ಕ್ಕೂ ಅಧಿಕ ಪ್ರಯಾಣಿಕರಿಗೆ ಗಾಯ

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಪಟ್ಟಣದಿಂದ ಗದಗ ಶಹರಕ್ಕೆ ತೆರಳುತ್ತಿದ್ದ ಬಸ್ ಕೊಡಗಾನೂರು ಸಮೀಪ ಪಲ್ಟಿಯಾದ ಪರಿಣಾಮ 8ಕ್ಕೂ ಅಧಿಕ ಪ್ರಯಾಣಿಕರು ಗಾಯಗೊಂಡ ಘಟನೆ ಗುರುವಾರ ಬೆಳಿಗ್ಗೆ ನಡೆದಿದೆ. ಗದಗ ಶಹರದಿಂದ ಪಟ್ಟಣಕ್ಕೆ ಆಗಮಿಸುತ್ತಿದ್ದ ಬಸ್‌ಗೆ ಜಾಗ ಬಿಡಲು ಹೋದಾಗ ಚಾಲಕನ ನಿಯಂತ್ರಣ ತಪ್ಪಿ ಈ ಘಟನೆ ನಡೆದಿದೆ ಎನ್ನಲಾಗಿದೆ.

ಬಸ್ ಪಲ್ಟಿಯಾದ ರಭಸಕ್ಕೆ 8ಕ್ಕೂ ಅಧಿಕ ಪ್ರಯಾಣಿಕರಿಗೆ ಗಾಯಗಳಾಗಿವೆ. ಓರ್ವ ವಯೋವೃದ್ಧ ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡಿದ್ದರು. ಉಳಿದ ಗಾಯಾಳುಗಳಿಗೆ ಜಿಲ್ಲಾಸ್ಪತ್ರೆಯಲ್ಲಿ



ಚಿಕಿತ್ಸೆ ನೀಡಲಾಗುತ್ತಿದೆ ಎಂದು ತಿಳಿದುಬಂದಿದೆ. ಈ ಕುರಿತು ಗಜೇಂದ್ರಗಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪಟ್ಟಣದಿಂದ ಗದಗ ಶಹರಕ್ಕೆ ಹೋಗುವ ಬಸ್‌ಗಳು ಪಲ್ಟಿ ಆಗುವ ಹಾಗೂ ಅಪಘಾತಗಳ ಸಂಖ್ಯೆ ಹೆಚ್ಚುತ್ತಿವೆ. ಇತ್ತೀಚೆಗೆ ಬಸ್ ಹಾಗೂ ಕ್ರೂಷರ್ ನಡುವೆ ಡಿಕ್ಕಿಯಾಗಿ ಸಾವು-ನೋವು ಸಂಭವಿಸಿದ ಘಟನೆ ಮಾಸುವ ಮುನ್ನವೇ ಮತ್ತೊಂದು ಘಟನೆ ನಡೆದಿದೆ.

## ಅಬಕಾರಿ ನೀತಿ ಪರಿಷ್ಕರಣೆ ಅಕ್ರಮ: ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಬಂಧನ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ,**



ಅಬಕಾರಿ ನೀತಿ ಪರಿಷ್ಕರಣೆಯಲ್ಲಿನ ಅಕ್ರಮಕ್ಕೆ ಸಂಬಂಧಿಸಿದಂತೆ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರನ್ನು ಇಡಿ ಅಧಿಕಾರಿಗಳು ಬಂಧಿಸಿದ್ದಾರೆ.

ದೆಹಲಿ ಅಬಕಾರಿ ನೀತಿ ಪ್ರಕರಣದಲ್ಲಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ಬಂಧನದಿಂದ ರಕ್ಷಣೆ ನೀಡಲು ದೆಹಲಿ ಹೈಕೋರ್ಟ್ ಗುರುವಾರ ನಿರಾಕರಿಸಿದ್ದು ಇದರ ಬೆನ್ನಲ್ಲೇ ಇಡಿ ಅಧಿಕಾರಿಗಳ ತಂಡ ದೆಹಲಿ ಮುಖ್ಯಮಂತ್ರಿ ನಿವಾಸಕ್ಕೆ ತೆರಳಿ ಮತ್ತೊಂದು ಸಮನ್ಸ್ ಜಾರಿ ಮಾಡಿ, ವಿಚಾರಣೆ ನಡೆಸಿ ಇದೀಗ ಬಂಧಿಸಿದೆ.

ಇಡಿ ಅಧಿಕಾರಿಗಳ ತಂಡ ದೆಹಲಿ ಸಿಎಂ ನಿವಾಸಕ್ಕೆ ಆಗಮಿಸಿದ ಕಾರಣ, ಮುನ್ನೆಚ್ಚರಿಕೆ ಕ್ರಮವಾಗಿ ದೆಹಲಿ ಪೊಲೀಸರು ಭದ್ರತೆ ಹೆಚ್ಚಿಸಿದ್ದಾರೆ ಮತ್ತು ಸಿವಿಲ್ ಲೈನ್ಸ್‌ನಲ್ಲಿರುವ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ನಿವಾಸದ ಬಳಿ ಹೆಚ್ಚುವರಿ ಸಿಬ್ಬಂದಿಯನ್ನು ನಿಯೋಜಿಸಿದ್ದಾರೆ. ಬ್ಯಾರಿಕೇಡ್‌ಗಳನ್ನು ಹಾಕಲಾಗಿದ್ದು, ಸಹಾಯಕ ಪೊಲೀಸ್ ಆಯುಕ್ತರ ಶ್ರೇಣಿಯ ಅಧಿಕಾರಿಗಳನ್ನು ನಿಯೋಜಿಸಲಾಗಿದೆ.

ದೆಹಲಿ ಸಿಎಂ ನಿವಾಸದ ಬಳಿ ಮತ್ತು ಇಡಿ ಕಚೇರಿ ಬಳಿ ದೆಹಲಿ ಪೊಲೀಸ್ ಸಿಬ್ಬಂದಿಯೊಂದಿಗೆ ಖಂಈ ಮತ್ತು ಅಖಕಈ ಪಡೆಗಳನ್ನು ನಿಯೋಜಿಸಲಾಗಿದೆ. ಸಿಎಂ ನಿವಾಸದ ಬಳಿ ಮತ್ತು ಇಡಿ ಕಚೇರಿ ಬಳಿ ಎಎಪಿ ಕಾರ್ಯಕರ್ತರು ಸೇರುವ ನಿರೀಕ್ಷೆ ಇರುವು ಹಿನ್ನೆಲೆಯಲ್ಲಿ ಹೆಚ್ಚಿನ ಭದ್ರತಾ ಸಿಬ್ಬಂದಿಯನ್ನು ನಿಯೋಜನೆ ಮಾಡಲಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಇಡಿ ಹೆಚ್ಚುವರಿ ಭದ್ರತಾ ಕ್ರಮಗಳನ್ನು ಕೋರಿದ್ದರಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಮೂಲಗಳು ತಿಳಿಸಿವೆ.

## ಸಂಪಾದಕೀಯ

# ಮತ್ತೆ ರಾಜರ ಆಳ್ವಿಕೆಯ ಕಾಲ ಬರುವುದು ನಿಶ್ಚಿತ

ಶತಮಾನಗಳ ಹಿಂದೆ ಭಾರತವನ್ನು ಅನೇಕ ರಾಜರು ಆಳ್ವಿಕೆ ಮಾಡುತ್ತಿದ್ದರು. ಯಾವಾಗ ಬ್ರಿಟಿಷರು ವ್ಯಾಪಾರದ ಹೆಸರಿನಲ್ಲಿ ಹೊಡೆದಾಡುವ ನೀತಿಯ ಮೂಲಕ ಭಾರತವನ್ನು ತಮ್ಮ ಕಪಿಮುಷ್ಟಿಗೆ ತೆಗೆದುಕೊಂಡರು. ಸುಮಾರು ಎರಡು ನೂರು ವರ್ಷ ಬ್ರಿಟಿಷರ ಆಳ್ವಿಕೆಯನ್ನು ಅನುಭವಿಸಬೇಕಾಯಿತು.

ಬ್ರಿಟಿಷರ ಆಳ್ವಿಕೆಯ ವಿರುದ್ಧ ಭಾರತದಲ್ಲಿ ಸುದೀರ್ಘ ಹೋರಾಟ ನಡೆಯಿತು. ಅನೇಕ ಜನರು ಪ್ರಾಣತ್ಯಾಗ ಮಾಡಿದರು. ಹಿಂಸೆ ಮತ್ತು ಅಹಿಂಸೆಯ ಮೂಲಕ ಸ್ವಾತಂತ್ರ್ಯಕ್ಕಾಗಿ ಅನೇಕ ಮಹನೀಯರು ಹಗಲಿರುಳು ಧರಣಿ ನಡೆಸಿದರು. ಭಾರತೀಯರ ಒಕ್ಕೊರಲಿನ ಹೋರಾಟಕ್ಕೆ ಮಣಿದು ಬ್ರಿಟಿಷರು ಭಾರತ ಬಿಟ್ಟು ತೊಲಗುವಂತಾಯಿತು. ದೇಶದಲ್ಲಿ ಪ್ರಜಾಪ್ರಭುತ್ವ ಜಾರಿಗೆ ಬಂತು.

ದೇಶದಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ಜಾರಿಯಲ್ಲಿದ್ದರೂ ಕುಟುಂಬ ರಾಜಕಾರಣಕ್ಕೆ ಕಡಿವಾಣ ಬೀಳಲು ಸಾಧ್ಯವಾಗಿಲ್ಲ. ಸದ್ಯಕ್ಕಂತೂ ಮೂರು, ನಾಲ್ಕನೇ ತಲೆಮಾರಿನ ರಾಜಕಾರಣಿಗಳು ದೇಶದ ಆಡಳಿತ ವ್ಯವಸ್ಥೆಯ ಭಾಗವಾಗಿದ್ದಾರೆ.

ಪ್ರಸ್ತುತ ಲೋಕಸಭೆ ಚುನಾವಣೆಯನ್ನು ಗಣನೆಗೆ ತೆಗೆದುಕೊಳ್ಳುವುದಾದರೆ, ಕರ್ನಾಟಕದ 28 ಕ್ಷೇತ್ರಗಳ ಪೈಕಿ 10 ಕ್ಷೇತ್ರಗಳಲ್ಲಿ ಕಾಂಗ್ರೆಸ್ಸಿನ ಕುಟುಂಬದ ಕುಡಿಗಳೇ ಕಣದಲ್ಲಿರುವುದು ಪರಿವಾರ ರಾಜಕಾರಣದ ಅತ್ಯಂತ ತಾಜಾ ಉದಾಹರಣೆಯಾಗಿದೆ.

ಇದು ಕೇವಲ ಕಾಂಗ್ರೆಸ್ ಪಕ್ಷಕ್ಕೆ ಮಾತ್ರ ಸೀಮಿತವಾಗಿಲ್ಲ. ಕೇಂದ್ರದಲ್ಲಿ 10 ವರ್ಷಗಳಿಂದ ಆಡಳಿತ ನಡೆಸುತ್ತಿರುವ ಬಿಜೆಪಿಯಲ್ಲೂ ಕುಟುಂಬ ರಾಜಕಾರಣ ಮೊಳಕೆಯೊಡೆಯುತ್ತಿದೆ. ದಶಕಗಳಿಂದ ಕಾಂಗ್ರೆಸ್ಸಿನ ಕುಟುಂಬ ರಾಜಕಾರಣವನ್ನ ದ್ವೇಷಿಸುತ್ತಲೇ ಬಂದ ಬಿಜೆಪಿ, ಈಗ ತಾನೇ ಕುಟುಂಬ ರಾಜಕಾರಣಕ್ಕೆ ಇಳಿದಿದೆ. ಹೀಗಾಗಿ ಇತ್ತೀಚಿನ ದಿನಗಳಲ್ಲಿ ಕಾಂಗ್ರೆಸ್ ಕುಟುಂಬ ರಾಜಕಾರಣದ ಬಗ್ಗೆ ಬಿಜೆಪಿಯ ಯಾವ ನಾಯಕರು ಧ್ವನಿ ಎತ್ತುತ್ತಿಲ್ಲ.

ಪರಿಸ್ಥಿತಿ ಹೀಗೆ ಮುಂದುವರಿದರೆ, ಭವಿಷ್ಯದಲ್ಲಿ ದೇಶದ ಆಡಳಿತ ಕೆಲವೇ ಕೆಲವು ಕುಟುಂಬಗಳ ಹಿಡಿತಕ್ಕೆ ಜಾರುತ್ತದೆ. ಆ ಕುಟುಂಬಗಳ ಮಧ್ಯೆ ಸಂಘರ್ಷ ನಡೆದು, ಒಬ್ಬ ಸರ್ವಾಧಿಕಾರಿ ಹುಟ್ಟಿಕೊಂಡರು ಅಚ್ಚರಿ ಪಡಬೇಕಾಗಿಲ್ಲ. ಲಕ್ಷಾಂತರ ಜನರ ಹೋರಾಟ ಮತ್ತು ತ್ಯಾಗದ ಫಲದಿಂದ ದೊರೆತ ಸ್ವಾತಂತ್ರ ಮತ್ತು ಪ್ರಜಾಪ್ರಭುತ್ವವನ್ನ ಉಳಿಸಿಕೊಳ್ಳಬೇಕಾದರೆ ಕುಟುಂಬ ರಾಜಕಾರಣ ಕೊನೆಯಾಗಲೇಬೇಕು.

---

**'ಸಾವಯವ ಕೃಷಿ ಒಂದು ಚಿಂತನ' ಗೋಷ್ಠಿಯಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು**

# ಅನ್ನ ಕೊಡುವ ರೈತನನ್ನು ಮರೆಯಬಾರದು



■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಶ್ರಮದ ಬೆವರಿನ ಫಲ ಶಾಶ್ವತ ಮತ್ತು ಸುಖದಾಯಕ. ಶ್ರಮವಿಲ್ಲದೇ ಬಂದ ಸಂಪತ್ತು ಬಹಳ ಕಾಲ ಉಳಿಯದು. ದೇಶವನ್ನು ಕಾಯುವ ಸೈನಿಕ ಮತ್ತು ಅನ್ನ ಕೊಡುವ ರೈತನನ್ನು ಎಂದಿಗೂ ಮರೆಯಬಾರದೆಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ 'ಸಾವಯವ ಕೃಷಿ ಒಂದು ಚಿಂತನ' ಗೋಷ್ಠಿಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಭಾರತ ಹಳ್ಳಿಗಳ ದೇಶ. ಹಳ್ಳಿಗಳು ಅಭಿವೃದ್ಧಿಯಾದರೆ ದೇಶ ಅಭಿವೃದ್ಧಿಯಾಗಲು ಸಾಧ್ಯ. ನೂರಕ್ಕೆ ಎಪ್ಪತ್ತರಷ್ಟು ಜನರು ರೈತರಿದ್ದಾರೆ. ಮನುಷ್ಯನ ಉಜ್ವಲ ಭವಿಷ್ಯಕ್ಕೆ ಆಹಾರ ಆರೋಗ್ಯ ಮತ್ತು ಆಧ್ಯಾತ್ಮ ಬಹಳ ಮುಖ್ಯ. ರಾಸಾಯನಿಕ ಗೊಬ್ಬರಗಳ ಬಳಕೆಯಿಂದಾಗಿ ಭೂಮಿ ಬರಡಾಗುತ್ತಿದೆ. ರಾಸಾಯನಿಕ ಗೊಬ್ಬರದಿಂದ ಬೆಳೆದ ಪದಾರ್ಥಗಳ ಸೇವನೆಯಿಂದ ಮನುಷ್ಯನ ಆರೋಗ್ಯದ ಮೇಲೆ ದುಷ್ಪರಿಣಾಮಗಳು ಉಂಟಾಗುತ್ತವೆ. ಸತ್ವಭರಿತ ಬೆಳೆಯನ್ನು ಬೆಳೆಯಬೇಕಾದರೆ ಸಾವಯವ ಕೃಷಿಯ ಅವಶ್ಯಕತೆಯಿದೆ. ಸಾವಯವ ಕೃಷಿಯಿಂದ ಬಂದ ಫಸಲುಗಳ ಬಳಕೆಯಿಂದ ಮನುಷ್ಯನ ಆರೋಗ್ಯ ಹೆಚ್ಚುವುದರಲ್ಲಿ ಯಾವುದೇ ಸಂದೇಹವಿಲ್ಲ.

ಸರ್ಕಾರಗಳು ಔದ್ಯೋಗಿಕ ಕ್ಷೇತ್ರಕ್ಕೆ ಕೊಡುವ ಸಹಕಾರವನ್ನು ಸಾವಯವ ಕೃಷಿ ಮಾಡುವ ರೈತನಿಗೆ ಕೊಟ್ಟರೆ ಅದ್ಭುತ ಸಾಧನೆಯನ್ನು ಮಾಡಲು ಸಾಧ್ಯ. ಮನುಷ್ಯ ಸ್ವೀಕರಿಸುವ ಆಹಾರ ವಸ್ತುಗಳು ಕಲಬೆರಕೆಯಿಂದ ಕಲುಷಿತಗೊಂಡಿವೆ. ಭೂಮಿ ಫಲವತ್ತಾಗಲು ಸಾವಯವ ಕೃಷಿಯನ್ನು ರೈತರು ಅಳವಡಿಸಿಕೊಂಡು ಉತ್ತಮ ಬೆಳೆ ಬೆಳೆದಾಗ ಯೋಗ್ಯ ಬೆಲೆಯನ್ನು ಸರ್ಕಾರ ದೊರಕಿಸಿಕೊಟ್ಟರೆ ರೈತರ ಬಾಳು ಉಜ್ವಲಗೊಳ್ಳಲು ಸಾಧ್ಯ. ರೈತರ ಹೆಸರಿನಲ್ಲಿ ಅದೆಷ್ಟೋ ಸಂಘಟನೆಗಳಿದ್ದರೂ ನಿಶ್ಚಿತ ಫಲ ಪಡೆಯಲು ಸಾಧ್ಯವಾಗುತ್ತಿಲ್ಲವೆಂದು ಶ್ರೀ ರಂಭಾಪುರಿ ಜಗದ್ಗುರುಗಳು ವಿಷಾದ ವ್ಯಕ್ತಪಡಿಸಿದರು.

ಸಮಾರಂಭ ಉದ್ಘಾಟಿಸಿದ ಕರ್ನಾಟಕ ರಾಜ್ಯ ರೈತ ಸಂಘದ ಅಧ್ಯಕ್ಷ ಹೆಚ್.ಆರ್. ಬಸವರಾಜ್ ಮಾತನಾಡಿ, ರೈತರ ಸಂಕಷ್ಟಗಳು ಬಹಳಷ್ಟಿವೆ. ಶ್ರಮದಿಂದ ದುಡಿಯುವ ರೈತರ ಪರಿಸ್ಥಿತಿ ಚಿಂತಾಜನಕವಾಗಿದೆ. ಸಕಾಲಕ್ಕೆ ಮಳೆಯಿಲ್ಲದೇ ಉತ್ತಮ ಬೆಳೆಯಿಲ್ಲದೇ ಇರುವುದು ಹಾಗೂ ಬೆಳೆದ ಬೆಳೆಗೆ ಹೆಚ್ಚಿನ ಬೆಲೆ ಸಿಗದಂತಾಗಿ ರೈತ ಸಾಲದಲ್ಲಿ ಸಿಲುಕಿ ನಲುಗುತ್ತಿದ್ದಾನೆ. ಇಂಥ ಸಂದರ್ಭದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಿಶೇಷ ಗಮನ ಹರಿಸಿ ರೈತರಿಗೆ ಹೆಚ್ಚು ಅನುಕೂಲಗಳನ್ನು ಕಲ್ಪಿಸಿಕೊಡಬೇಕೆಂದು ಆಗ್ರಹಿಸಿದರು.

ಹುಕ್ಕೇರಿ ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಸಾವಯವ ಕೃಷಿ ಪದ್ಧತಿಯನ್ನು ರೈತರು ಅಳವಡಿಸಿಕೊಳ್ಳಬೇಕು. ಪಶು ಸಂಗೋಪನೆಯಿಂದ ಬಹಳಷ್ಟು ಪ್ರಯೋಜನವಿದೆ. ಕೊಟ್ಟಿಗೆ ಗೊಬ್ಬರ ಬಳಸುವುದರಿಂದ ಭೂಮಿಯ ಸತ್ವ ಸಮೃದ್ಧಿಗೊಂಡು ಉತ್ತಮ ಬೆಳೆ ಬರಲು ಸಾಧ್ಯವಾಗುತ್ತದೆ. ಕೃಷಿ ಕ್ಷೇತ್ರದಲ್ಲಿ ಹಲವಾರು ಅಭಿವೃದ್ಧಿ ಪರವಾದ ಯೋಜನೆಗಳಿವೆ. ಅವುಗಳ ಪ್ರಯೋಜನವನ್ನು ರೈತರು ಪಡೆಯುವಂತಾಗಬೇಕೆಂದರು.

### ಅಡ್ಡಪಲ್ಲಕ್ಕಿ ಮಹೋತ್ಸವ

ಸಮಾರಂಭಕ್ಕೂ ಮುನ್ನ ಶ್ರೀ ಸೋಮೇಶ್ವರ ದೇವಸ್ಥಾನದಿಂದ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ದೇವಸ್ಥಾನದವರೆಗೆ ಶ್ರೀ ರಂಭಾಪುರಿ ಜಗದ್ಗುರುಗಳವರ ಬೆಳ್ಳಿ ಅಡ್ಡಪಲ್ಲಕ್ಕಿ ಮಹೋತ್ಸವ ಸಕಲ ವಾದ್ಯ ವೈಭವಗಳೊಂದಿಗೆ ಸಡಗರ ಸಂಭ್ರಮದಿಂದ ಜರುಗಿತು. ನಂದಿಕೋಲು, ಭಜನಾ ತಂಡಗಳು ಸೇರಿದಂತೆ ವಿವಿಧ ಕಲಾ ತಂಡಗಳು ಉತ್ಸವದಲ್ಲಿ ಪಾಲ್ಗೊಂಡಿದ್ದರು. ಸಂಜೆ ಶ್ರೀ ವೀರಭದ್ರಸ್ವಾಮಿ ಚಿಕ್ಕರಥೋತ್ಸವ ಜರುಗಿತು.

ಇನ್ನೋರ್ವ ಕೃಷಿ ತಜ್ಞ ಚಂದ್ರಶೇಖರ ನಾರಣಾಪುರ ಮಾತನಾಡಿ ನೈಸರ್ಗಿಕ ಕೃಷಿ ಮಾಡುವ ರೈತ ಎದೆಗುಂದಬಾರದು. ನೈಸರ್ಗಿಕ ಕೃಷಿಯಿಂದ ಮೊದಲು ಹೆಚ್ಚು ಬೆಳೆ ಬೆಳೆಯಲು ಸಾಧ್ಯವಾಗುವುದಿಲ್ಲ. ಕ್ರಮೇಣ ಭೂಮಿಯ ಫಲವತ್ತತೆ ಹೆಚ್ಚಾಗಿ ಉತ್ತಮ ಬೆಳೆಯಲು ಸಾಧ್ಯವಾಗುತ್ತದೆ. ಅಲ್ಪ ಭೂಮಿಯಲ್ಲಿ ಒಳ್ಳೆ ಫಸಲು ಬೆಳೆಯಲು ಸಾಧ್ಯವೆಂಬುದನ್ನು ಸ್ವತಃ ನಾನು ಕೃಷಿ ಮಾಡಿ ಯಶಸ್ವಿಯಾಗಿದ್ದೇನೆ. ರೈತ ಸಮುದಾಯ ಜಾಗೃತಗೊಂಡು ನೈಸರ್ಗಿಕ ಕೃಷಿಯನ್ನು ಹೆಚ್ಚು ಬೆಳೆಸಲು ಮುಂದಾಗಬೇಕೆಂದರು.

ಎಡೆಯೂರು ರೇಣುಕ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು. ನೆಗಳೂರು ಸಂಸ್ಥಾನ ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕ ನುಡಿದರು. ಮುಕ್ತಿಮಂದಿರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಉಪಸ್ಥಿತರಿದ್ದರು.

ಸಂಗೊಳ್ಳಿ ಹಿರೇಮಠದ ಗುರುಲಿಂಗ ಶಿವಾಚಾರ್ಯ ಸ್ವಾಮಿಗಳು, ಚಿಕ್ಕಮಗಳೂರು ಕೂಡ್ಲಿಗೆರೆ ಎಸ್.ಹಾಲೇಶ, ಉಷಾ ಮತ್ತು ಚಂದ್ರಶೇಖರ ನಿಟ್ಟೂರು, ರೇಣುಕಾ ಮತ್ತು ಪ್ರಸನ್ನ ಕುಮಾರ್, ತವಡೆಹಳ್ಳಿ, ದಿವ್ಯಶ್ರೀ ಮತ್ತು ಶಂಕರ ಮೋಹನ್ ಶಂಕರನಹಳ್ಳಿ ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು. ಸುಳ್ಳ, ಮಳಲಿ, ಬಿಳಕಿ, ಚನ್ನಗಿರಿ, ಸಿಂದಗಿ,ಹರಪನಹಳ್ಳಿ, ಹಂಪಸಾಗರ, ಹಿರೆಮಲ್ಲನಕೆರಿ, ಮೈನಹಳ್ಳಿ, ಅಮ್ಮಿನಬಾವಿ, ಅಡ್ನೂರು, ಸಿದ್ಧರಬೆಟ್ಟ, ಹಾರನಹಳ್ಳಿ, ಮಾವಿನಹಳ್ಳಿ ಶ್ರೀಗಳು ವೇದಿಕೆಯ ಮೇಲೆ ಇದ್ದರು.

ಚಿಕ್ಕಮಗಳೂರಿನ ತನ್ಮಯಿ ಭರತ ನಾಟ್ಯ ಪ್ರದರ್ಶಿಸಿದರು. ಜಗದ್ಗುರು ರೇಣುಕಾಚಾರ್ಯ ಶಿಕ್ಷಣ ಪ್ರತಿಷ್ಠಾನದ ಸದಸ್ಯ ಬಿ.ಎ. ಶಿವಶಂಕರ ಸ್ವಾಗತಿಸಿದರು. ಚಿಕ್ಕಮಗಳೂರು ದೇವಿ ಗುರುಕುಲದ ಡಾ. ದಯಾನಂದ ಶಾಸ್ತ್ರಿಗಳು ಭಕ್ತಿ ಗೀತೆ ಹಾಡಿದರು. ತಾವರೆಕೆರೆ ಡಾ. ಅಭಿನವ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ನಿರೂಪಿಸಿದರು.

---

# ಕಾಡಾ ಅಧ್ಯಕ್ಷ ಹಸನ್‌ಸಾಬ್‌ರಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ನಗರದ ಜಿಲ್ಲಾ ಕಾಂಗ್ರೆಸ್ ಕಛೇರಿಯ ಕಾರ್ಯಾಲಯದಲ್ಲಿ ಕುಷ್ಟಗಿ ಮಾಜಿ ಶಾಸಕ, ನೂತನ ಕಾಡಾ ಅಧ್ಯಕ್ಷ ಹಸನ್‌ಸಾಬ್ ದೋಟಿಹಾಳ ಅವರನ್ನು ಜಿಲ್ಲಾ ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ, ಗ್ಯಾರಂಟಿ ಪ್ರಾಧಿಕಾರ ಸದಸ್ಯೆ ಜ್ಯೋತಿ ಎಂ.ಗೊಂಡಬಾಳ ಅವರ ನೇತೃತ್ವದಲ್ಲಿ ಸನ್ಮಾನಿಸಲಾಯಿತು.

ತುಂಗಭದ್ರಾ ಅಚ್ಚುಕಟ್ಟು ಪ್ರಾಧಿಕಾರ ಕಾಡಾ ಮುನಿರಾಬಾದಿಗೆ ಮೊದಲ ಸಲ ಮುಸ್ಲಿಂ ಮುಖಂಡರಿಗೆ ಒಲಿದಿದ್ದು, ಅವರನ್ನು ಸಂವಿಧಾನ ಪೀಠಿಕೆ ಇರುವ ಬುದ್ಧ, ಬಸವ, ಅಂಬೇಡ್ಕರ್, ವಾಲ್ಮೀಕಿ, ಚನ್ನಮ್ಮ ಮತ್ತು ಕನಕದಾಸರ ಭಾವಚಿತ್ರದ ಸ್ಮರಣಿಕೆ ನೀಡಿ ಗೌರವಿಸಲಾಯಿತು. ಹಸನ್‌ಸಾಬರ ಆಯ್ಕೆ ಕಾಂಗ್ರೆಸ್ ಸರಕಾರದ ನಿಜವಾದ ಸಬ್‌ಕಾ ಸಾಥ್ ಸಬ್‌ಕಾ ವಿಕಾಸ ಆಗಿದೆ ಎಂದು ಜ್ಯೋತಿ ಗೊಂಡಬಾಳ ಹೇಳಿದರು.

ಬಿಜೆಪಿ ಕೇವಲ ರಾಜಕೀಯಕ್ಕಾಗಿ ಧರ್ಮದ ಬಗ್ಗೆ ಮಾತನಾಡುತ್ತಿದ್ದು, ಧರ್ಮವನ್ನು ಮುಂದಿಟ್ಟು ಜನರ ದಿಕ್ಕು ತಪ್ಪಿಸುವದರ ಜೊತೆಗೆ ಅವರನ್ನು ಅನ್ನಕ್ಕಾಗಿ ಹಪಾಹಪಿಸುವಂತೆ ಮಾಡುತ್ತಿದೆ. ಉದ್ಯೋಗವಿಲ್ಲ, ಸ್ವಂತ ಉದ್ಯೋಗ ಮಾಡಲು ಆಗದ ಸ್ಥಿತಿ ಇದೆ, ಎಲ್ಲಾ ಉದ್ಯಮಗಳಲ್ಲಿ ಗುಜರಾತಿಯ ಇಬ್ಬರು ಪ್ರಧಾನಿ ಗೆಳೆಯರೇ ಪಾರುಪತ್ಯ ಹೊಂದಿದ್ದು ಸಾಮಾನ್ಯ ಜನರು ಬದುಕಲು ಆಗುತ್ತಿಲ್ಲ ಎಂದರು.

ಈ ಸಂದರ್ಭದಲ್ಲಿ ಕೊಪ್ಪಳ ಲೋಕಸಭಾ ಅಭ್ಯರ್ಥಿ ಕೆ. ರಾಜಶೇಖರ್ ಹಿಟ್ನಾಳ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಮಾಲತಿ ನಾಯಕ್, ಕಾಂಗ್ರೆಸ್ ಪರಿಶಿಷ್ಟ ಪಂಗಡ ಘಟಕದ ಅಧ್ಯಕ್ಷ ಮಂಜುನಾಥ ಜಿ.ಗೊಂಡಬಾಳ, ಜಿ.ಪಂ ಮಾಜಿ ಸದಸ್ಯ ಗೂಳಪ್ಪ ಹಲಗೇರಿ, ನಾಟಕ ಅಕಾಡೆಮಿ ಸದಸ್ಯ ಚಾಂದಪಾಶಾ ಕಿಲ್ಲೆದಾರ್, ಸುಮಂಗಲಾ ಶೇಖರ್ ಗಿಣಗೇರಿ, ಗಂಗಮ್ಮ, ಶ್ರೀನಿವಾಸ ಪಂಡಿತ್, ಮಾನವಿ ಪಾಶಾ ಇತರರು ಇದ್ದರು.

---

**ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ವತಿಯಿಂದ ವಚನ ಪ್ರಬಂಧ ಸ್ಪರ್ಧೆ**

# ವಚನಗಳು ವ್ಯಕ್ತಿತ್ವ ವಿಕಸನಕ್ಕೆ ಮಾರ್ಗದರ್ಶಿ

■ ವಿಜಯಸಾಕ್ಷಿ ಸುದ್ದಿ, ಗದಗ

ವಚನ ಸಾಹಿತ್ಯ ಸುಲಭವಾಗಿ ಅರ್ಥವಾಗುವ ಮತ್ತು ಅಪಾರ ಜ್ಞಾನವನ್ನು ನೀಡುವ ಸಾಹಿತ್ಯವಾಗಿದ್ದು, ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ವಚನಗಳು ಮಾರ್ಗದರ್ಶಿಯಾಗಿವೆ. ಆದ್ದರಿಂದ ವಿದ್ಯಾರ್ಥಿಗಳು ಪಠ್ಯ ವಿಷಯದ ಜೊತೆಗೆ ವಚನಗಳನ್ನು ಅಧ್ಯಯನ ಮಾಡಬೇಕು ಎಂದು ತೋಂಟ-ದಾರ್ಯ ಜಾತ್ರಾ ಮಹೋತ್ಸವ ಸಮಿತಿ ಉಪಾಧ್ಯಕ್ಷರಾದ ಶ್ರೀದೇವಿ ಶೆಟ್ಟರ್ ನುಡಿದರು.

ಅವರು ನಗರದ ತೋಂಟ-ದಾರ್ಯ ಶಿಕ್ಷಣ ಸಂಸ್ಥೆಯಲ್ಲಿ ವಿಶ್ವ ಮಹಿಳಾ ದಿನದ ಅಂಗವಾಗಿ ಅಕ್ಕಮಹಾದೇವಿ ಯೋಗ ವಿಜ್ಞಾನಕೇಂದ್ರವು ಆಯೋಜಿಸಿದ್ದ ವಚನ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತರಣಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ಅತಿಥಿಗಳಾಗಿ ಭಾಗವಹಿಸಿದ್ದ ನಗರಸಭೆ ಮಾಜಿ ಅಧ್ಯಕ್ಷರಾದ ಶಿವಲೀಲಾ ಅಕ್ಕಿ ಮಾತನಾಡಿ, ವಚನ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಿರುವ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಕಾರ್ಯ ಅಭಿನಂದನೀಯ. ಇಂಥ ಮೌಲಿಕ ಸ್ಪರ್ಧೆಗಳಲ್ಲಿ ಸೋಲು-ಗೆಲುವಿಗಿಂತ ಭಾಗವಹಿಸುವುದು ಮುಖ್ಯವಾಗಿರುತ್ತದೆ. ವಿದ್ಯಾರ್ಥಿಗಳು ತಮ್ಮ ಜೀವನದುದ್ದಕ್ಕೂ ಶಿಕ್ಷಕರಿಗೆ ಗೌರವ ನೀಡಬೇಕು. ಪ್ರತಿಯೊಬ್ಬ ವಿದ್ಯಾರ್ಥಿ ತಂದೆ-ತಾಯಿಗಳೊಂದಿಗೆ, ಗುರು-ಹಿರಿಯರೊಂದಿಗೆ ಹೇಗೆ ನಡೆದುಕೊಳ್ಳಬೇಕು ಎಂಬುದನ್ನು ತಿಳಿಸುವ ವಚನಸಾಹಿತ್ಯ ಮಕ್ಕಳಿಗೆ ಒಳ್ಳೆಯ ಸಂಸ್ಕಾರ ನೀಡುತ್ತವೆ. ಸಾಮಾಜಿಕ ಸ್ವಾಸ್ಥ್ಯವನ್ನು ಕಾಪಾಡುವ ಕೆಲಸವನ್ನು ವಚನಗಳು ಮಾಡುತ್ತವೆ ಎಂದರು.

> ವಿಶ್ವಗುರು ಬಸವೇಶ್ವರರು ಜಾತಿ ವ್ಯವಸ್ಥೆಯನ್ನು ತೊಡೆದುಹಾಕಿ ಸಮಸಮಾಜವನ್ನು ನಿರ್ಮಿಸಲು ಶ್ರಮಿಸಿದ ಮಹಾತ್ಮರು. ಇತ್ತೀಚೆಗೆ ಕರ್ನಾಟಕ ಸರ್ಕಾರ ಬಸವೇಶ್ವರರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕ ಎಂದು ಘೋಷಿಸಿರುವುದು ಶ್ಲಾಘನೀಯವಾಗಿದೆ. ಮಕ್ಕಳನ್ನು ಪ್ರಜ್ಞಾವಂತ ನಾಗರಿಕರನ್ನಾಗಿಸುವ ನಿಟ್ಟಿನಲ್ಲಿ ವಚನ ಸಾಹಿತ್ಯದ ಅಧ್ಯಯನ ಮಹತ್ವಪೂರ್ಣವಾಗಿದೆ ಎಂದು ಶ್ರೀದೇವಿ ಶೆಟ್ಟರ್ ನುಡಿದರು.

ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ವೇದಿಕೆ ಮೇಲೆ ತೋಂಟದಾರ್ಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೊಟ್ರೇಶ ಮೆಣಸಿನಕಾಯಿ, ಅಕ್ಕಮಹಾದೇವಿ ಚಟ್ಟಿ, ಸುವರ್ಣಾ ವಸ್ತ್ರದ, ವಿಶಾಲಾಕ್ಷಿ ಕುರಗೋಡ, ಕವಿತಾ ನಾರಗುಣ್ಣವರ ಉಪಸ್ಥಿತರಿದ್ದರು. ಸುರೇಖಾ ಕುಂಬಾರಗೇರಿಮಠ ನಿರೂಪಿಸಿದರೆ, ಸುಮಾ ಹಿರೇಮಠ ವಂದಿಸಿದರು. ಶಿಕ್ಷಕರಾದ ಕೆ.ಎಂ ಗೌಡರ, ಬಶೀರಾ ಕಲೇಬಾಯಿ, ಮಂಜುಳಾ ಭೂಮಣ್ಣವರ, ಶಶಿಧರಗೌಡ ಪಾಟೀಲ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

---

# ಮಹಿಳೆಯರು ತಮ್ಮ ಜವಾಬ್ದಾರಿ ನಿರ್ವಹಿಸಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮನೆಯೇ ಮೊದಲ ಪಾಠಶಾಲೆ, ತಾಯಿಯೇ ಮೊದಲ ಗುರು ಎನ್ನುವಂತೆ ಪುರುಷರಿಗಿಂತಲೂ ಮಹಿಳೆಯರಿಗೆ ಹೆಚ್ಚಿನ ಜವಾಬ್ದಾರಿ ಮತ್ತು ಪಾತ್ರವಿದೆ. ಸಮಾಜದ ಕಣ್ಣಾಗಿರುವ ಮಹಿಳೆಯರು ತಮ್ಮ ಜವಾಬ್ದಾರಿಯನ್ನು ನಿರ್ವಹಿಸಬೇಕಿದೆ ಎಂದು ತಾಲೂಕ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಮಹಿಳಾ ಘಟಕದ ಅಧ್ಯಕ್ಷೆ ಅನ್ನಪೂರ್ಣ ಮಹಾಂತಶೆಟ್ಟರ ಅಭಿಪ್ರಾಯಪಟ್ಟರು.

ಅವರು ತಾಲೂಕು ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಮಹಿಳಾ ಘಟಕದಿಂದ ಹಮ್ಮಿಕೊಳ್ಳಲಾಗಿದ್ದ ಮಹಿಳಾ ದಿನಾಚರಣೆ ಮತ್ತು ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಮಾಜದ ಹಿರಿಯ ಸಾಹಿತಿ ಲಲಿತಕ್ಕ ಕೆರಿಮನಿ ಮಾತನಾಡಿ, ಮಹಿಳೆ ಮಗಳು, ಪತ್ನಿ, ತಾಯಿ, ಸ್ನೇಹಿತೆ, ಮಾರ್ಗದರ್ಶಿಯಾಗಿ ಸಮಾಜದ ಕಣ್ಣಾಗಿ ಕಾರ್ಯನಿರ್ವಹಿಸುತ್ತಾಳೆ. ಬದಲಾಗುತ್ತಿರುವ ಇಂದಿನ ವ್ಯವಸ್ಥೆಯಲ್ಲಿ ಮಹಿಳೆಯರು ತಮ್ಮಲ್ಲಿನ ಕೀಳರಿಮೆ ಬಿಟ್ಟು ಸಾಧಕರ ಪ್ರೇರಣೆಯಿಂದ ಎಲ್ಲ ರಂಗಗಳಲ್ಲಿ ಪಾಲ್ಗೊಂಡು ಸಮಾಜಮುಖಿಗಳಾಗಿ ಕಾರ್ಯನಿರ್ವಹಿಸಬೇಕಿದೆ ಎಂದು ಹೇಳಿದರು.

ಶಿಕ್ಷಣ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಜಯಲಕ್ಷ್ಮೀ ಮಹಾಂತಶೆಟ್ಟರ ಮತ್ತು ಬಟ್ಟೂರಿನ ಶಿಕ್ಷಕಿ ಗುರುಬಾಯಿ ಹುಲಸೂರ ಅವರನ್ನು ಸನ್ಮಾನಿಸಲಾಯಿತು. ಬಟ್ಟೂರ ಗ್ರಾಮದ ಮಹಿಳೆಯರ ಮಹೇಶ್ವರಿ ಭಜನಾ ಮಂಡಳಿಯ ಸದಸ್ಯೆಯರು ನಡೆಸಿಕೊಟ್ಟ ಭಜನೆ ಕಾರ್ಯಕ್ರಮಕ್ಕೆ ವಿಶೇಷ ಮೆರಗು ನೀಡಿತ್ತು. ನಂತರ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ನೂತನ ಪದಾಧಿಕಾರಿಗಳ ಅಧಿಕಾರ ಹಸ್ತಾಂತರ ನಡೆಯಿತು. ನೂತನ ಅಧ್ಯಕ್ಷೆಯಾಗಿ ಶಾರದಾ ಮಹಾಂತಶೆಟ್ಟರ, ಉಪಾಧ್ಯಕ್ಷರಾಗಿ ಲಕ್ಷ್ಮವ್ವ ಆಚಾರಿ ಅಧಿಕಾರ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಸುವರ್ಣಕ್ಕ ಬಹದ್ದೂರದೇಸಾಯಿ, ಶಕುಂತಲಾ ಹೊರಟ್ಟಿ, ಮಂಜುಳಾ ಸತ್ಯಪ್ಪನವರ, ಶೈಲಾ ಆದಿ, ವಿಜಕ್ಕ ಬಾಳಿಕಾಯಿ, ಜಯಲಕ್ಷ್ಮೀ ಗಡ್ಡದೇವರಮಠ ಮುಂತಾದವರಿದ್ದರು.

---

# ಮಹಾನಗರ ಪೊಲೀಸ್ ಆಯುಕ್ತರ ದಿಢೀರ್ ಭೇಟಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಲೋಕಸಭೆ ಸಾರ್ವತ್ರಿಕ ಚುನಾವಣೆ-2024 ಸಂಬಂಧಿಸಿದಂತೆ ಧಾರವಾಡ ಜಿಲ್ಲಾ ವ್ಯಾಪ್ತಿಯಲ್ಲಿ ಚುನಾಚಣಾ ಅಕ್ರಮಗಳನ್ನು ತಡೆಗಟ್ಟಲು ಮತ್ತು ಮಾದರಿ ನೀತಿ ಸಂಹಿತೆ ಉಲ್ಲಂಘನೆ ಆಗದಂತೆ ಮುನ್ನೆಚ್ಚರಿಕೆ ವಹಿಸಲು 24 ಚೆಕ್‌ಪೋಸ್ಟ್‌ಗಳನ್ನು ತೆರೆಯಲಾಗಿದೆ. ಇದರಲ್ಲಿ 12 ಚೆಕ್‌ಪೋಸ್ಟ್‌ಗಳು ಮಹಾನಗರ ಪೊಲೀಸ್ ವ್ಯಾಪ್ತಿಯಲ್ಲಿದ್ದು, ಗುರುವಾರ ಸಂಜೆ ಮಹಾನಗರ ಪೊಲೀಸ್ ಆಯುಕ್ತರಾದ ರೇಣುಕಾ ಸುಕುಮಾರ್ ಅವರು ವಿವಿಧ ಚೆಕ್‌ಪೋಸ್ಟ್‌ಗಳಿಗೆ ದಿಢೀರ್ ಭೇಟಿ ನೀಡಿ, ವಾಹನಗಳ ತಪಾಸಣೆ, ಚೆಕ್‌ಪೋಸ್ಟ್ ಸಿಬ್ಬಂದಿಗಳ ಕಾರ್ಯವೈಖರಿ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಅವರು ಮಾತನಾಡಿ, ಚೆಕ್‌ಪೋಸ್ಟ್‌ಗಳಲ್ಲಿ ಪ್ರತಿ ವಾಹನವನ್ನೂ ಕಡ್ಡಾಯವಾಗಿ ತಪಾಸಣೆ ಮಾಡಬೇಕು. ಸರಿಯಾಗಿ ತಪಾಸಣೆ ಮಾಡಿದಾಗ



ನಿಯಮಾನುಸಾರ ಪೂರಕ ದಾಖಲೆ ಇಲ್ಲದ ಹಣ, ವಸ್ತು, ಉಡುಗೊರೆಗಳನ್ನು ಸೀಜ್ ಮಾಡಬೇಕು.

ತಪಾಸಣೆ ಸಂದರ್ಭದಲ್ಲಿ ಸಂಶಯ ಬಂದಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಸಮರ್ಥನೀಯ ದಾಖಲಾತಿಗಳನ್ನು ಪಡೆಯಬೇಕೆಂದು ಕರ್ತವ್ಯನಿರತ ಸಿಬ್ಬಂದಿಗಳಿಗೆ ಸೂಚಿಸಿದರು.

ಪ್ರತಿ ಚೆಕ್‌ಪೋಸ್ಟ್ ಕರ್ತವ್ಯಕ್ಕೆ ನಿಯೋಜನೆಗೊಂಡ ಮ್ಯಾಜಿಸ್ಟ್ರೇಟ್ ಅಧಿಕಾರಿ, ಸಿಬ್ಬಂದಿಗಳು ತಮಗೆ ನಿಗದಿಪಡಿಸಿದ ಸಮಯಕ್ಕೆ ಹಾಜರಾಗಿ ಕರ್ತವ್ಯ ನಿರ್ವಹಿಸಬೇಕು. ಚೆಕ್‌ಪೋಸ್ಟ್ ಸಿಬ್ಬಂದಿಗಳ ಕರ್ತವ್ಯ ನಿರ್ವಹಣೆ, ವಾಹನಗಳ ತಪಾಸಣೆ ಕಾರ್ಯವನ್ನು ನಿಯಮಾನುಸಾರ ಸಮರ್ಪಕವಾಗಿ ಮಾಡುತ್ತಿರುವ ಬಗ್ಗೆ ಸಿಸಿ ಟಿವಿಗಳ ಮೂಲಕ ಜಿಲ್ಲಾ ಕಂಟ್ರೋಲ್ ರೂಮ್‌ನಲ್ಲಿ ನಿರಂತರ ನಿಗಾವಹಿಸಲಾಗುತ್ತಿದೆ. ಯಾವುದೇ ರೀತಿಯ ಕರ್ತವ್ಯ ಲೋಪ ಕಂಡುಬಂದಲ್ಲಿ ಸೂಕ್ತ ಕ್ರಮ ಜರುಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಹೇಳಿದರು.

ಹಳಿಯಾಳ ಚೆಕ್‌ಪೋಸ್ಟ್‌ನಲ್ಲಿ ಸ್ವತಃ ತಾವೇ ವಾಹನಗಳ ತಪಾಸಣೆ ಮಾಡಿ, ವಾಹನ ಚಾಲಕರಿಗೆ, ಪ್ರಯಾಣಿಕರಿಗೆ ಮಾದರಿ ನೀತಿ ಸಂಹಿತೆ ಬಗ್ಗೆ ತಿಳುವಳಿಕೆ ನೀಡಿದರು.

# ಶ್ರೀ ಕರಿಯಮ್ಮದೇವಿ ಜಾತ್ರಾ ಮಹೋತ್ಸವ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶ್ರೀ ಕರಿಯಮ್ಮದೇವಿ ಜಾತ್ರಾ ಮಹೋತ್ಸವವು ಏಪ್ರಿಲ್ 4ರಂದು ಜರುಗಲಿದ್ದು, ಮಂಗಲವಾದ್ಯಗಳೊಂದಿಗೆ ಕಳಸದ ಮೆರವಣಿಗೆ ಹಾಗೂ ಏ.9ರ ಸಾಯಂಕಾಲ 5.30 ಗಂಟೆಗೆ ಮಹಾರಥೋತ್ಸವವು ವಿಜೃಂಭಣೆಯಿಂದ ಜರುಗಲಿದೆ.

ಇದೇ ಸಂದರ್ಭದಲ್ಲಿ ಸುಮಂಗಲೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಸೇರಿದಂತೆ, ಮಕ್ಕಳಿಗಾಗಿ ಮನೋರಂಜನಾ ಕಾರ್ಯಕ್ರಮಗಳು, ರಂಗೋಲಿ ಸ್ಪರ್ಧೆಗಳು ಜರುಗಲಿವೆ. ಏ.10ರ ಮಧ್ಯಾಹ್ನ 1 ಗಂಟೆಗೆ ಮಹಾಅನ್ನಸಂತರ್ಪಣೆ ಹಾಗೂ ಸಂಜೆ 5.30ಕ್ಕೆ ಕಡುಬಿನ ಕಾಳಗ ಜರುಗಲಿದೆ.

ನಗರದ ಸದ್ಭಕ್ತರು ಶ್ರೀ ಕರಿಯಮ್ಮದೇವಿಯ ಜಾತ್ರೆಯಲ್ಲಿ ಪಾಲ್ಗೊಂಡು ಶ್ರೀದೇವಿಯ ಕೃಪೆಗೆ ಪಾತ್ರರಾಗಬೇಕು. ಈ ಎಲ್ಲ ಕಾರ್ಯಕ್ರಮಗಳಲ್ಲಿ ದೇವಸ್ಥಾನ ಸುಧಾರಣಾ ಸಮಿತಿಯ ಅಧ್ಯಕ್ಷ ಸಿ.ಕೆ. ಮಾಳಶೆಟ್ಟರ್, ಗೌರವ ಅಧ್ಯಕ್ಷ ಎಲ್.ಡಿ. ಚಂದಾವರಿ, ಶ್ರೀ ಕರಿಯಮ್ಮದೇವಿ ಜಾತ್ರಾ ಮಹೋತ್ಸವ ಸಮಿತಿ ಪದಾಧಿಕಾರಿಗಳಾದ ವಾಯ್.ಕೆ. ಪಿಡಗಣ್ಣವರ, ಎ.ಟಿ. ನರೇಗಲ್ಲ, ಹೆಚ್.ಬಿ. ಶಿರಗುಪ್ಪಿ, ಎಸ್.ಎ. ಹೊಳೆಯಣ್ಣವರ, ಸಮಿತಿಯ ಉಪಾಧ್ಯಕ್ಷ ಶಶಿಧರ ದಿಂಡೂರ, ಪ್ರಮುಖರಾದ ವಿಜಯಲಕ್ಷ್ಮೀ ದಿಂಡೂರ, ಭುವನೇಶ್ವರಿ ಹಿರೇಮಠ, ಬಸವಣ್ಣೆವ್ವ ಪಿಡಗಣ್ಣವರ, ಕಿರಣ ಆರಟ್ಟಿ, ಮುತ್ತು ಮಲ್ಲಾಪೂರ, ಎಂ.ಡಿ. ದೇಸಾಯಿ, ಬಿ.ಎಸ್. ಕಂಠಿ, ಶಶಿಧರ ಕುರಿ ಸೇರಿದಂತೆ ಜಾತ್ರಾ ಕಮಿಟಿಯ ಸದಸ್ಯರು, ಹಿರಿಯರು, ಸದ್ಭಕ್ತರು ಪಾಲ್ಗೊಳ್ಳುವರು ಎಂದು ಕಮಿಟಿಯ ಅಧ್ಯಕ್ಷ ಜಗದೀಶ ಪೂಜಾರ ಪತ್ರಿಕಾ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

### ಹೋಳಿ ಹಬ್ಬಕ್ಕೆ ರಂಗು ತುಂಬುತ್ತ, ತಮಟೆ ಬಾರಿಸಿ ಮೋಜು ಮಾಡುವ ಮಕ್ಕಳು

# ಕಾಮಣ್ಣನ ಮಕ್ಕಳು ಏನೇನ ಕದ್ದರು...

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಭಾತೃತ್ವದ ಕೊಂಡಿ ಬೆಸೆಯುವ ಹಬ್ಬಗಳಲ್ಲಿ ರಂಗು ರಂಗಿನ ಹೋಳಿ ಹಬ್ಬವೂ ಒಂದು. ಗಂಡು ಮಕ್ಕಳ ಹಬ್ಬವೆಂದು ಗುರುತಿಸುವ ಈ ಹಬ್ಬ ಬಂತೆಂದರೆ ಸಾಕು, ಮಕ್ಕಳಿಗೆ, ಯುವಕರಿಗೆ ಎಲ್ಲಿಲ್ಲದ ಖುಷಿ. ಶಿವರಾತ್ರಿಯ ಮಾರನೇ ದಿನದಿಂದ ಆರಂಭವಾಗುವ ಈ ಹಬ್ಬವು ಹುಣ್ಣಿಮೆವರೆಗೂ 15 ದಿನಗಳ ಕಾಲ ನಡೆಯುತ್ತದೆ.

ಈ ಹಬ್ಬದ ಪ್ರಯುಕ್ತ ಮಕ್ಕಳು, ಪಡ್ಡೆ ಹುಡುಗರು ಬೆಳಗು ಮುಂಜಾನೆಯಿಂದ ಹಿಡಿದು ರಾತ್ರಿಯವರೆಗೂ ಊರಿನ ಓಣಿ-ಓಣಿಗಳ ತುಂಬಾ ತಿರುಗಾಡಿ ಹೊಯ್ಕೊಂಡ ಬಡ್ಕೊಂಡ ಬಗೆ ಬಗೆಯ ಶೈಲಿಯಲ್ಲಿ ತಮಟೆ ಬಾರಿಸುತ್ತಾ 'ಕಾಮಣ್ಣನ ಮಕ್ಕಳು.. ಕಳ್ಳ ಸುಳ್ಳ ಮಕ್ಕಳು, ಏನೇನು ಕದ್ದರು ಕಟಿಗಿ ಕುಳ್ಳು ಕದ್ದರು, ಯಾತಕ್ಕೆ ಕದ್ದರು, ಕಾಮಣ್ಣನ ಸುಡಾಕ ಕದ್ದರು' ಎಂದು ಹಾಡುತ್ತಾ ಜನರನ್ನು ಆಕರ್ಷಿಸುತ್ತಿದ್ದಾರೆ.

ಬಣ್ಣದೋಕುಳಿ ಆಡುವ ಹಬ್ಬಕ್ಕೆ ಇನ್ನು ಕೆಲವು ದಿನಗಳು ಬಾಕಿಯಿದ್ದು, ನರೇಗಲ್ಲ ಪಟ್ಟಣ ಅಷ್ಟೇ ಅಲ್ಲದೆ ಕೋಡಿಕೊಪ್ಪ, ಜಕ್ಕಲಿ, ಬೂದಿಹಾಳ, ಮಾರನಬಸರಿ, ನಿಡಗುಂದಿ, ಹಾಲಕೆರೆ, ಅಬ್ಬಿಗೇರಿ, ಕೋಟುಮಚಗಿ, ನಿಡಗುಂದಿಕೊಪ್ಪ, ನಾಗರಾಳ, ಹೊಸಳ್ಳಿ, ಗುಜಮಾಗಡಿ, ಡ.ಸ. ಹಡಗಲಿ, ತೋಟಗಂಟಿ, ಕೊಚಲಾಪೂರ, ಮಲ್ಲಾಪೂರ, ದ್ಯಾಂಪೂರ, ನಾರಾಯಣಪೂರ ಸೇರಿದಂತೆ ಇನ್ನು ಅನೇಕ ಕಡೆಗಳಲ್ಲಿ ಈಗಾಗಲೇ ತಮಟೆ ನಾದ ಪ್ರತಿಧ್ವನಿಸುತ್ತಿದೆ. ಮಧ್ಯಾಹ್ನ ಶಾಲೆ ಬಿಟ್ಟ ನಂತರ ಮಕ್ಕಳ ಕೈ-ಬಾಯಿಗೆ ಬಿಡುವಿಲ್ಲದ ಕೆಲಸ! ಮಕ್ಕಳು ಬಾಯಿ ಬಾಯಿ ಬಡಿದುಕೊಳ್ಳುತ್ತಾ ಕೇಕೆ, ಸಿಳ್ಳೆ ಹಾಕುತ್ತಾ ಕಿವಿಗಡಚಿಕ್ಕುವ ತಮಟೆ ನಾದಕ್ಕೆ ಕುಣಿದು ಕುಪ್ಪಳಿಸುತ್ತಿರುವ ಹಾಗೂ ಲಬೋ ಲಬೋ ಹೊಯ್ಕೊಳ್ಳುವ ದೃಶ್ಯ ಸಾಮಾನ್ಯವಾಗಿದೆ.

ಕೆಲ ಯುವಕರು ಸಂಭ್ರಮದಿಂದ ತಮಟೆ, ಹಲಗೆ ಮೂಲಕ ಬಗೆ ಬಗೆಯ ಸ್ವರಗಳನ್ನು ನುಡಿಸುತ್ತಿರುವ ದೃಶ್ಯ ಸಾಮಾನ್ಯವಾಗಿದೆ. ಈ ಗುಂಗು ಈಗ ಜನರ ಕರ್ಣಪಟಲದಲ್ಲಿ ರಿಂಗಣಿಸುತ್ತಿದೆ. ಹದಿ ಹರೆಯದ ಹುಡುಗರಂತೂ ಲಯಬದ್ಧವಾಗಿ ತಮಟೆ ನುಡಿಸಿದರೆ, ಪುಟಾಣಿ ಮಕ್ಕಳು ಹತ್ತಾರು ಬಗೆಯಲ್ಲಿ ಬಾರಿಸಿ ಖುಷಿ ಪಡುತ್ತಿದ್ದಾರೆ. ಕಳೆದೊಂದು ವಾರದಿಂದ ಪಟ್ಟಣ, ಗ್ರಾಮೀಣ ಎಂಬ ಭೇದವಿಲ್ಲದೇ ಎಲ್ಲೆಲ್ಲೂ ಯುವಕರ, ಮಕ್ಕಳ ಕೈಯಲ್ಲಿ ಪ್ಲಾಸ್ಟಿಕ್ ತಮಟೆ ಸದ್ದು ಮಾರ್ದನಿಸುತ್ತಿದೆ. ಚಿಣ್ಣರ ಉತ್ಸಾಹವಂತೂ ದಿನೇ ದಿನೇ ಹೆಚ್ಚಾಗುತ್ತಲೇ ಸಾಗಿದೆ. ಊಟ ತಿಂಡಿ ಮರೆತು ತಮಟೆ ಬಾರಿಸುವುದರಲ್ಲಿ ತಲ್ಲೀನರಾಗಿದ್ದಾರೆ.

ಒಂದೆಡೆ ಗುಂಪು ಗುಂಪಾಗಿ ಯುವಕರು ಕಟ್ಟಿಗೆ, ಕುಳ್ಳು ಕದಿಯುವ ಕೆಲಸದಲ್ಲಿ ತೆ-ಡಗಿದ್ದರೆ, ಮತ್ತೊಂದೆಡೆ ಬೀದಿ ಬೀದಿಗಳಲ್ಲಿ ನಾಚಿಕೊಳ್ಳದಂತಹ ಗೆಳೆಯರನ್ನು ಸತ್ತ ಹೆಣದಂತೆ ವೇಷ ತೊಡಿಸಿ, ಚಟ್ಟದ ಮೇಲೆ ಕೂಡ್ರಿಸಿ ಮೆರವಣಿಯೊಂದಿಗೆ ಮೋಜಿಗಾಗಿ ಹಾಡು ಹಾಡಿಕೊಂಡು ಅಳುವ ದೃಶ್ಯ ನೆನಪಿಸಿ ಹಾಸ್ಯ, ವಿನೋದ, ಅಣುಕು ಪ್ರದರ್ಶನ ಮಾಡುವುದು, ನಗೆಯ ಹೊನಲು ಹರಿಸುವುದು ಸೇರಿದಂತೆ ನಿತ್ಯ ಒಂದಿಲ್ಲೊಂದು ಬಗೆಯ ಮನರಂಜನೆ ಆಟದೊಂದಿಗೆ ಜನರನ್ನು ರಂಜಿಸಿ ಹಬ್ಬದ ರಂಗು ಹೆಚ್ಚಿಸುವಂತೆ ಮಾಡುತ್ತಿದ್ದಾರೆ.

## ಚಿತ್ರಕಲಾ ಸ್ಪರ್ಧೆಯಲ್ಲಿ ವಿಡಿಎಸ್ ಕ್ಲಾಸಿಕ್ ಶಾಲೆಯ ವಿದ್ಯಾರ್ಥಿಗಳ ಸಾಧನೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಸಮಿತಿಯ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ಬಣ್ಣದ ಮನೆ ಸಾಂಸ್ಕೃತಿಕ ವೇದಿಕೆ ಹಮ್ಮಿಕೊಂಡಿದ್ದ 'ಚಿಣ್ಣರ ಚಿತ್ರ ಚಿತ್ತಾರ' ರಾಷ್ಟ್ರಮಟ್ಟದ ಚಿತ್ರ ಕಲೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ, ಉತ್ತಮವಾದ ಚಿತ್ರಗಳನ್ನು ಬಿಡಿಸಿ ಪ್ರತಿಭೆ ಮೆರೆದಿದ್ದಾರೆ.

ಬಣ್ಣದ ಮನೆ ಸಾಂಸ್ಕೃತಿಕ ವೇದಿಕೆ ವತಿಯಿಂದ ನೀಡಲಾದ ಪ್ರಶಸ್ತಿಪತ್ರ ಹಾಗೂ ನೆನಪಿನ ಕಾಣಿಕೆಗಳನ್ನು ವಿಜೇತರಾದ ವಿದ್ಯಾರ್ಥಿಗಳಿಗೆ ಶಾಲಾ ಹಂತದಲ್ಲಿ ವಿತರಿಸಿ ಶುಭ ಕೋರಲಾಯಿತು. ಶಾಲೆಯ ಶೈಕ್ಷಣಿಕ ಮಾರ್ಗದರ್ಶಕ ಪ್ರತೀಕ ಎಸ್.ಹುಯಿಲಗೋಳ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿ, ಬಣ್ಣದ ಮನೆ ಸಾಂಸ್ಕೃತಿಕ ವೇದಿಕೆಯು ರಾಷ್ಟ್ರ ಮಟ್ಟದ ಎಲ್ಲಾ ಶಾಲೆಯ ಮಕ್ಕಳಿಗೆ ಚಿತ್ರಕಲಾ ಸ್ಪರ್ಧೆಯನ್ನು ಏರ್ಪಡಿಸಿ, ಮಕ್ಕಳಲ್ಲಿರುವ ಕಲಾ ಪ್ರತಿಭೆಯನ್ನು ಅನಾವರಣಗೊಳಿಸಿ, ಅವರ ಕಲಾ ಜೀವನಕ್ಕೆ ದಾರಿದೀಪದಂತೆ ಉತ್ತಮವಾದ ಕಾರ್ಯವನ್ನು ಮಾಡುತ್ತಿದೆ. ನಮ್ಮ ಶಾಲೆಯ ಮಕ್ಕಳು ಕೈಯಲ್ಲಿ ಕಲಾ ಕುಂಚ ಹಿಡಿದು ತಮ್ಮ ಕಲ್ಪನೆಗಳಿಗೆ ನಿಲುಕಿದ, ತಮ್ಮ ಪ್ರತಿಭೆಗೆ ಅನುಗುಣವಾಗಿ ಚಿತ್ರ ಬಿಡಿಸಿ ತಮ್ಮ ಕಲಾ ಪ್ರತಿಭೆಯನ್ನು ಹೊರ ಹಾಕಿದ್ದಾರೆ ಎಂದರು.

ಶಾಲೆಯ ಮುಖ್ಯೋಪಾಧ್ಯಾಯ ಎಂ.ಆರ್. ಡೊಳ್ಳಿನ ಮಾತನಾಡಿದರು. ಚಿತ್ರ ಕಲೋತ್ಸವ ಸ್ಪರ್ಧೆಯಲ್ಲಿ ಭಾಗವಹಿಸಿದ 103 ಮಕ್ಕಳಿಗೆ ನೆನಪಿನ ಕಾಣಿಕೆ ಹಾಗೂ ಪ್ರಶಸ್ತಿ ಪ್ರದಾನ ಮಾಡಲಾಯಿತು. ಶಾಲೆಯ ಚೇತನಗೌಡ ಎನ್. ರಾಷ್ಟ್ರಮಟ್ಟದ ಪ್ರಮುಖ ಚಿತ್ರಕಲಾ ಪ್ರಶಸ್ತಿಗೆ ಆಯ್ಕೆಯಾಗಿದ್ದು, ಸಂಸ್ಥೆಗೆ ಕೀರ್ತಿ ತಂದ ಈ ಎಲ್ಲಾ ವಿದ್ಯಾರ್ಥಿಗಳಿಗೆ ಸಂಸ್ಥೆಯ ಅಧ್ಯಕ್ಷ ಡಿ.ಬಿ. ಹುಯಿಲಗೋಳ, ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ, ಆಡಳಿತಾಧಿಕಾರಿ ಡಾ. ಗಂಗೂಬಾಯಿ ಪವಾರ, ಆಡಳಿತ ಮಂಡಳಿಯ ಸದಸ್ಯರು, ಶಿಕ್ಷಕರು, ಸಿಬ್ಬಂದಿ ವರ್ಗದವರು ಹಾಗೂ ಪಾಲಕರು ಅಭಿನಂದಿಸಿದ್ದಾರೆ.

### ಮಾದರಿ ನೀತಿ ಸಂಹಿತೆ ಕುರಿತು ಡಿಸಿ, ಜಿಲ್ಲಾ ಚುನಾವಣಾಧಿಕಾರಿ ದಿವ್ಯ ಪ್ರಭು ಮಾಹಿತಿ

## 6742 ಪ್ರಚಾರ ಸಾಮಗ್ರಿಗಳ ತೆರವು

■ವಿಜಯಸಾಕ್ಷಿ ಸುದ್ದಿ, ಧಾರವಾಡ



ಭಾರತ ಚುನಾವಣಾ ಆಯೋಗದಿಂದ ಧಾರವಾಡ ಲೋಕಸಭೆ ಮತಕ್ಷೇತ್ರಕ್ಕೆ ಸಾರ್ವತ್ರಿಕ ಚುನಾವಣೆ ಘೋಷಣೆಯಾದ ಮಾರ್ಚ್ 16ರಂದು, ಮಾದರಿ ನೀತಿ ಸಂಹಿತೆ ಜಾರಿಯಾದ 24 ಗಂಟೆಯ ಒಳಗಡೆ ಎಲ್ಲ ಸರ್ಕಾರಿ, ಸಾರ್ವಜನಿಕ ಸ್ಥಳಗಳಲ್ಲಿ ಮತ್ತು ಖಾಸಗಿ ಒಡೆತನದಲ್ಲಿರುವ ಸ್ಥಳ, ಕಟ್ಟಡಗಳ ಮೇಲೆ ಪ್ರಕಟಿಸಲಾಗಿದ್ದ ವಿವಿಧ ರೀತಿಯ ಪ್ರಚಾರ ಹಾಗೂ ಮತದಾರರ ಮೇಲೆ ಪ್ರಭಾವ ಬೀರುವಂತಹ ಸುಮಾರು 6742 ಪ್ರಚಾರ ಸಾಮಗ್ರಿಗಳನ್ನು ತೆರವುಗೊಳಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮಾದರಿ ನೀತಿ ಸಂಹಿತೆ ಜಾ-ರಿಯಾದ ಮರುಕ್ಷಣದಿಂದಲೇ ಜಿಲ್ಲೆಯ ಎಲ್ಲ ನಗರ, ಪಟ್ಟಣ, ಮಹಾನಗರ ಹಾಗೂ ಗ್ರಾಮಗಳಲ್ಲಿ ಸರಕಾರಿ, ಸಾರ್ವಜನಿಕ ಮತ್ತು ಖಾಸಗಿ ಸ್ಥಳ, ಕಟ್ಟಡಗಳಲ್ಲಿ ಪ್ರಚುರಪಡಿಸಿದ್ದ, ಮತದಾರರ ಮೇಲೆ ಪ್ರಭಾವ ಬೀರಬಹುದಾದ ವಿವಿಧ ರೀತಿಯ ಪ್ರಚಾರ ಸಾಮಗ್ರಿಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗಿದೆ. ಮಾದರಿ ನೀತಿ ಸಂಹಿತೆ ತಂಡದ ಸದಸ್ಯರು ಜಿಲ್ಲೆಯ ಪ್ರತಿ ಸ್ಥಳಗಳನ್ನು ಪರಿಶೀಲಿಸುತ್ತಿದ್ದು, ಸ್ಥಳೀಯ ಹಾಗೂ ಗ್ರಾಮಮಟ್ಟದಲ್ಲಿ ಕೂಲಂಕುಷವಾಗಿ ಈ ಕುರಿತು ಪರಿಶೀಲಿಸಿ, ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಮಾದರಿ ನೀತಿ ಸಂಹಿತೆ ಜಾರಿಯಾದ 72 ಗಂಟೆಯೊಳಗೆ ಜಿಲ್ಲೆಯ ಖಾಸಗಿ ಮಾಲೀಕತ್ವದ ಸ್ಥಳಗಳಲ್ಲಿರುವ 1158 ಗೋಡೆ ಬರಹಗಳು, 658 ಪೋಸ್ಟರ್‌ಗಳು, 577 ಬ್ಯಾನರ್‌ಗಳು ಮತ್ತು 304 ಇತರೆ ಸೇರಿ ಒಟ್ಟು 2697 ಪ್ರಚಾರ ಸಾಮಗ್ರಿಗಳನ್ನು 206 ತಂಡಗಳಿಂದ ತೆರವುಗೊಳಿಸಲಾಗಿದೆ.

ಲೋಕಸಭೆ ಸಾರ್ವತ್ರಿಕ ಚುನಾವಣೆಗೆ ಸಂಬಂದಿಸಿದಂತೆ ಯಾವುದೇ ರೀತಿಯ ಪ್ರಚಾರ ಸಾಮಗ್ರಗಳನ್ನು ಪ್ರಚುರ ಪಡಿಸುವ ಮೊದಲು ಭಾರತ ಚುನಾವಣಾ ಆಯೋಗದ ನಿಯಮಾನುಸಾರ ಜಿಲ್ಲಾ ಎಂಸಿಎಂಸಿ ಸಮಿತಿ ಅನುಮತಿ ಪಡೆದುಕೊಳ್ಳಬೇಕು. ತಪ್ಪಿದಲ್ಲಿ ನಿಯಮಾನುಸಾರ ತಕ್ಷಣ ಕ್ರಮ ಜರುಗಿಸಲಾಗುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಾದರಿ ನೀತಿ ಸಂಹಿತೆ ಜಾರಿಯಾದ 24 ಗಂಟೆಯೊಳಗೆ ಜಿಲ್ಲೆಯ ಸರಕಾರಿ ಸ್ಥಳಗಳಲ್ಲಿ ಪ್ರಕಟಿಸಲಾಗಿದ್ದ 634 ಗೋಡೆ ಬರಹಗಳು, 623 ಪೋಸ್ಟರ್‌ಗಳು, 393 ಬ್ಯಾನರ್‌ಗಳು ಹಾಗೂ 451 ಇತರೆ ಸೇರಿ ಒಟ್ಟು 2101 ಪ್ರಚಾರ ಸಾಮಗ್ರಿಗಳನ್ನು 173 ತಂಡಗಳಿಂದ ತೆರವುಗೊಳಿಸಲಾಗಿದೆ.

ಮಾದರಿ ನೀತಿ ಸಂಹಿತೆ ಜಾರಿಯಾದ 48 ಗಂಟೆಯೊಳಗೆ ಜಿಲ್ಲೆಯ ಸಾರ್ವಜನಿಕ ಸ್ಥಳಗಳಲ್ಲಿರುವ 362 ಗೋಡೆ ಬರಹಗಳು, 745 ಪೋಸ್ಟರ್‌ಗಳು, 391 ಬ್ಯಾನರ್‌ಗಳು ಹಾಗೂ 446 ಇತರೆ ಸೇರಿ ಒಟ್ಟು 1944 ಪ್ರಚಾರ ಸಾಮಗ್ರಿಗಳನ್ನು 191 ತಂಡಗಳಿಂದ ತೆರವುಗೊಳಿಸಲಾಗಿದೆ.

## ಎಸ್‌ಎಸ್‌ಎಲ್‌ಸಿ ಪರೀಕ್ಷೆ: ಪರೀಕ್ಷಾ ಕೇಂದ್ರಗಳ ಸುತ್ತಲೂ ಪ್ರತಿಬಂಧಕಾಜ್ಞೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು ಮಾರ್ಚ್/ ಎಪ್ರಿಲ್ -2023ರ ಎಸ್ ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಗಳನ್ನು ಮಾರ್ಚ್ 25 ರಿಂದ ಎಪ್ರಿಲ್ 6 ರವರೆಗೆ ಬೆಳಿಗ್ಗೆ 9.30ರಿಂದ ಮಧ್ಯಾಹ್ನ 1.45 ಗಂಟೆಯವರೆಗೆ ನಡೆಸಲಿದೆ.

ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯ 60 ಪರೀಕ್ಷಾ ಕೇಂದ್ರಗಳಲ್ಲಿ ಮಾರ್ಚ್ 25 ರಿಂದ ಎಪ್ರಿಲ್ 6 ರವರೆಗೆ ಬೆಳಿಗ್ಗೆ 9.30 ಗಂಟೆಯಿಂದ ಮಧ್ಯಾಹ್ನ 2.30 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.


ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ.

ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಜೆರಾಕ್ಸ್ ಅಂಗಡಿ, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ. ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಮತ್ತು ಹೊರ ಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ, ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳಾದ ವೈಶಾಲಿ ಎಂ.ಎಲ್. ಆದೇಶ ಹೊರಡಿಸಿದ್ದಾರೆ.

### ಗದಗ ತಾಲೂಕು ಸ್ವೀಪ್ ಸಮಿತಿಯ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಪಾಟೀಲ

# ಚುನಾವಣೆ ಹಬ್ಬದಂತೆ ಆಚರಿಸಿ, ಕಡ್ಡಾಯ ಮತದಾನ ಮಾಡಿ

■ವಿಜಯಸಾಕ್ಷಿ ಸುದ್ದಿ, ಗದಗ



ಚುನಾವಣೆಯನ್ನು ಎಲ್ಲರೂ ಹಬ್ಬದಂತೆ ಆಚರಿಸಬೇಕು. ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ್ ಪಾಟೀಲ್ ಹೇಳಿದರು.

ಅವರು, ಲೋಕಸಭಾ ಚುನಾವಣೆ-2024ರ ಅಂಗವಾಗಿ ಗುರುವಾರ ಮತದಾನ ಜಾಗೃತಿಗಾಗಿ ಗದಗ ತಾಲೂಕು ಸ್ವೀಪ್ ಸಮಿತಿ ಹಾಗೂ ಕುರ್ತಕೋಟಿ ಗ್ರಾಮ ಪಂಚಾಯತ್, ಅಂತೂರ್ ಗ್ರಾಮ ಪಂಚಾಯತ್ ವತಿಯಿಂದ ಗ್ರಾಮದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಬರುವ ಲೋಕಸಭಾ ಚುನಾವಣೆಯಲ್ಲಿ ಎಲ್ಲರೂ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವ ಉದ್ದೇಶದಿಂದ ವಿನೂತನವಾಗಿ ಸ್ವೀಪ್ ಸಮಿತಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಕುರ್ತಕೋಟಿ ಗ್ರಾಮದ ಸಾರ್ವಜನಿಕರಿಗೆ ಗ್ರಾಮದಲ್ಲಿ ಮತದಾನ ಜಾಗೃತಿ ಅಭಿಯಾನ ಕಾರ್ಯಕ್ರಮ ಆಚರಿಸಲಾಗುತ್ತಿದೆ ಎಂದರು.

ನಂತರ 18 ವರ್ಷ ತುಂಬುವ ಯುವ ಮತದಾರರಿಗೆ VHA App ದಲ್ಲಿ ನೋಂದಾಯಿಸಲು ಪಾಟೀಲ ಕರೆ ನೀಡಿದರು.

ಗದಗ ತಾಲೂಕು ಪಂಚಾಯತ್ ಸಹಾಯಕ ನಿರ್ದೇಶಕರು ಮಾತನಾಡಿ, ಕುರ್ತಕೋಟಿ ಹಾಗೂ ಅಂತೂರ್ ಎರಡು ಗ್ರಾಮ ಪಂಚಾಯತ್ ವತಿಯಿಂದ ಆಯೋಜಿಸಿರುವ ಈ ಕಾರ್ಯಕ್ರಮ ಅರ್ಥಪೂರ್ಣವಾಗಬೇಕಾದರೆ ಗ್ರಾಮದ ಎಲ್ಲ ಮತದಾರರು ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಮೇ 7 ರಂದು ಜರುಗುವ ಮತದಾನದಲ್ಲಿ ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತ್ ಸಹಾಯಕ ನಿರ್ದೇಶಕ (ಗ್ರಾ. ಉ) ತಾ.ಪಂ , ಗ್ರಾ.ಪಂ ಪಿಡಿಒ, ನರೇಗಾ ಸಿಬ್ಬಂದಿ ಹಾಗೂ ಕಾಯಕ ಬಂಧುಗಳು, ಸ್ವಸಹಾಯ ಸಂಘದ ಸದಸ್ಯರು, ಮತ್ತು ಪಂಚಾಯತ್ ಸಿಬ್ಬಂದಿಗಳು ಹಾಜರಿದ್ದರು.

### ಗದಗ ಜಿಲ್ಲೆಯ ಸಾರ್ವಜನಿಕರ ಗಮನಕ್ಕೆ

# ಕುಡಿಯುವ ನೀರು ಮಿತವಾಗಿ ಬಳಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ವಿಭಾಗ, ಗದಗ ವ್ಯಾಪ್ತಿಯಲ್ಲಿ ಬರುವ ಗದಗ, ಮುಂಡರಗಿ, ನರಗುಂದ, ರೋಣ ಮತ್ತು ಶಿರಹಟ್ಟಿ ತಾಲೂಕಗಳ ವ್ಯಾಪ್ತಿಯಲ್ಲಿ ಬರುವ 343 ಜನವಸತಿಗಳಲ್ಲಿ ವಾಸಿಸುವ ಎಲ್ಲಾ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ಜಿಲ್ಲೆಯ ಪ್ಯಾಕೇಜ್-1 ರ ಯೋಜನೆಯನ್ನು ಸವದತ್ತಿಯ ನವಿಲು ತೀರ್ಥದ ರೇಣುಕಾ ಜಲಾಶಯದಲ್ಲಿರುವ ಮಲಪ್ರಭಾ ನದಿಯಿಂದ ನರಗುಂದ ಮತ್ತು ರೋಣ ತಾಲೂಕಿನ ವ್ಯಾಪ್ತಿಯಲ್ಲಿ ಬರುವ ಒಟ್ಟು 131 ಜನವಸತಿಗಳಿಗೆ ಸಂಬಂಧ ಪಟ್ಟ ಗ್ರಾಮ ಪಂಚಾಯತಿಯ ವ್ಯವಸ್ಥೆಯಡಿ ಮೇಲ್ಮಟ್ಟದ ಜಲ ಸಂಗ್ರಹಗಾರಗಳಿಗೆ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಮತ್ತು ಪ್ಯಾಕೇಜ್-2ರ ಯೋಜನೆಯನ್ನು ಶಿಂಗಟಾಲೂರು ಬ್ಯಾರೇಜ್‌ನ ಹತ್ತಿರ ಇರುವ ತುಂಗಭದ್ರಾ ನದಿಯಿಂದ ಗದಗ, ಮುಂಡರಗಿ ಮತ್ತು ಶಿರಹಟ್ಟಿ ತಾಲೂಕಿನ ವ್ಯಾಪ್ತಿಯಲ್ಲಿ ಬರುವ ಒಟ್ಟು212 ಜನವಸತಿಗಳಿಗೆ ಸಂಬಂಧಪಟ್ಟ ಗ್ರಾಮ ಪಂಚಾಯತಿಯ ವ್ಯವಸ್ಥೆಯಡಿ ಮೇಲ್ಮಟ್ಟದ ಜಲ ಸಂಗ್ರಹಗಾರಗಳಿಗೆ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ.

ಪ್ರಸ್ತುತ ಮಲಪ್ರಭಾ ಮತ್ತು ತುಂಗಭದ್ರಾ ನದಿ ಪಾತ್ರದಲ್ಲಿ ನೀರಿನ ಹರಿವು ಕಡಿಮೆಯಾಗಿದ್ದು, ಮೂಲ ಜಲಾಶಯಗಳಲ್ಲಿ ಕೂಡಾ ನಿರೀಕ್ಷಿತ ಮಟ್ಟದಲ್ಲಿ ನೀರಿನ ಪ್ರಮಾಣ ಸಂಗ್ರಹವಿರದೇ ಇರುವ ಹಿನ್ನಲೆಯಲ್ಲಿ ನೀರು ಸರಬರಾಜು ಮಾಡುವುದು ಕಷ್ಟ ಸಾಧ್ಯವಾಗಿರುತ್ತದೆ. ಜಿಲ್ಲೆಯ ಎಲ್ಲಾ ನೀರು ಬಳಕೆದಾರರು ಶುಚಿತ್ವ ಕಾಪಾಡಿಕೊಂಡು, ಶುದ್ಧವಾಗಿ ನೀರನ್ನು ಸಂಗ್ರಹಿಸಿಟ್ಟುಕೊಳ್ಳಬೇಕು ಹಾಗೂ ಮಿತವಾಗಿ ನೀರನ್ನು ಬಳಸಬೇಕು. ಅಗತ್ಯಕ್ಕೆ ತಕ್ಕಂತೆ ನೀರನ್ನು ಬಳಸುವುದರಿಂದ ನೀರಿನ ಉಳಿತಾಯ ಮಾಡಬಹುದು, ನೀರನ್ನು ಅನ್ಯತಾ ವ್ಯರ್ಥ ಮಾಡಬಾರದು, ನಳದಲ್ಲಿ ಅಥವಾ ಪೈಪಲೈನ್‌ನಲ್ಲಿ ನೀರಿನ ಸೋರಿಕೆ ಕಂಡು ಬಂದಲ್ಲಿ ಸಂಬಂಧಪಟ್ಟ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗಳ ಗಮನಕ್ಕೆ ತರಬೇಕೆಂದು ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ವಿಭಾಗದ ಪ್ರಕಟಣೆ ತಿಳಿಸಿದೆ.

# ವಿದ್ಯಾಯಜ್ಞ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಪಟ್ಟಣದ ದಿ ಫಿನಿಕ್ಸ್ ಇಂಟರ್‌ನ್ಯಾಷನಲ್ ಸ್ಕೂಲ್‌ನಲ್ಲಿ ಮಾ.22ರ ಮಧ್ಯಾಹ್ನ 12ಕ್ಕೆ ಗಣಹೋಮ, ವಿದ್ಯಾಯಜ್ಞ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.


ಶಿರಹಟ್ಟಿಯ ಜ.ಫಕ್ಕೀರ ಸಿದ್ದರಾಮ ಮಹಾಸ್ವಾಮಿಗಳು, ಮತ್ತುನೊಣವಿನಕೇರಿ ಕಾಡಶಿದ್ದೇಶ್ವರ ಮಠದ ಡಾ. ಕರಿವೃಷಭ ದೇಶಿಕೇಂದ್ರ ಶಿವಯೋಗೇಶ್ವರ ಮಹಾಸ್ವಾಮಿಗಳು ಸಾನಿಧ್ಯ ವಹಿಸುವರು. ಅತಿಥಿಗಳಾಗಿ ಸಾಹಿತಿ ಕೆ.ಎ. ಬಳಿಗೇರ, ಡಾ. ರಾಜೇಂದ್ರ ಗಡಾದ ಮತ್ತಿತರರು ಆಗಮಿಸುವರು ಎಂದು ಶಾಲಾ ಆಡಳಿತ ಮಂಡಳಿ ಉಪಾಧ್ಯಕ್ಷ ರಾಜಶೇಖರಯ್ಯ ಹಾಲೇವಾಡಿಮಠ ಹೇಳಿದರು.

ಅವರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕಳೆದ 12 ವರ್ಷಗಳಿಂದ ನರ್ಸರಿಯಿಂದ ಹೈಸ್ಕೂಲ್‌ವರೆಗೆ ವಿದ್ಯಾರ್ಥಿಗಳಿಗೆ ಪಠ್ಯ ಶಿಕ್ಷಣದ ಜತೆಗೆ ಪಠ್ಯೇತರ ಶಿಕ್ಷಣ ಮತ್ತು ಗಾಂಧೀಜಿ ಅವರ ಮೂಲ ಶಿಕ್ಷಣಕ್ಕೆ ಆದ್ಯತೆ ನೀಡಲಾಗಿದೆ. ನೂತನ ಆಡಳಿತ ಮಂಡಳಿಯಿಂದ ಉನ್ನತ ಶಿಕ್ಷಣದೊಂದಿಗೆ ಬಡ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ, ಸಕಲ ಸೌಲಭ್ಯವುಳ್ಳ ಶಿಕ್ಷಣ ಕೊಡಲಾಗುವುದು ಎಂದರು.

ಈ ವೇಳೆ ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ಕೊಟಗಿ, ಕಾರ್ಯದರ್ಶಿ ಶಿವಣ್ಣ ಗಾಂಜಿ, ನಿರ್ದೇಶಕರಾದ ಎಸ್.ಬಿ. ಕೊಣ್ಣೂರ, ಚಂದ್ರಶೇಖರ ಕಗ್ಗಲಗೌಡ್ರ, ಕಿರಣಕುಮಾರ ನಾಲವಾಡ, ವಿಜಯಕುಮಾರ ಹತ್ತಿಕಾಳ, ವಿಜಯ ಬೂದಿಹಾಳ ಮತ್ತು ಆಡಳಿತ ಮಂಡಳಿ ಸದಸ್ಯರು ಇದ್ದರು.

## ನೂತನ ಚುನಾವಣಾ ಆಯುಕ್ತರ ನೇಮಕಕ್ಕೆ ತಡೆಯಾಜ್ಞೆ ನೀಡಲು ಸುಪ್ರೀಂ ಕೋರ್ಟ್ ನಕಾರ, ಅರ್ಜಿ ವಜಾ!

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ಇಬ್ಬರು ನೂತನ ಚುನಾವಣಾ ಆಯುಕ್ತರ ನೇಮಕಕ್ಕೆ ತಡೆಯಾಜ್ಞೆ ನೀಡುವಂತೆ ಕೋರಿ ಸಲ್ಲಿಸಲಾಗಿದ್ದ ಅರ್ಜಿಗಳನ್ನು ಸುಪ್ರೀಂ ಕೋರ್ಟ್ ಗುರುವಾರ ವಜಾಗೊಳಿಸಿದ್ದು, ಚುನಾವಣೆ ಸಮೀಪಿಸುತ್ತಿರುವ ಕಾರಣ ಇದು ಅವ್ಯವಸ್ಥೆ ಮತ್ತು ಅನಿಶ್ಚಿತತೆಗೆ ಕಾರಣವಾಗುತ್ತದೆ ಎಂದು ಹೇಳಿದೆ.

ಚುನಾವಣಾ ಆಯೋಗವು "ಕಾರ್ಯನಿರ್ವಾಹಕರ ಅಧೀನ ದಲ್ಲಿ ಇಲ್ಲ ಎಂಬುದನ್ನು ಗಮನಿಸಿದ ಸುಪ್ರೀಂ ಕೋರ್ಟ್, ಮುಖ್ಯ ಚುನಾವಣಾ ಆಯುಕ್ತರು ಮತ್ತು ಇತರ ಚುನಾವಣಾ ಆಯುಕ್ತರ (ನೇಮಕಾತಿ, ಸೇವಾ ಷರತ್ತುಗಳು ಮತ್ತು ಕಛೇರಿಯ ನಿಯಮಗಳು) ಕಾಯ್ದೆ 2023ಕ್ಕೆ ಯಾವುದೇ ಮಧ್ಯಂತರ ತಡೆ ನೀಡಲು ನಿರಾಕರಿಸಿತು. 2023 ರ ಕಾಯ್ದೆಯ ಸಿಂಧುತ್ವವನ್ನು ಪ್ರಶ್ನಿಸುವ ಪ್ರಮುಖ ಅರ್ಜಿಗಳನ್ನು ಪರಿಶೀಲಿಸುವುದಾಗಿ ಹೇಳಿದ ಸುಪ್ರೀಂ ಕೋರ್ಟ್, ಆರು ವಾರಗಳಲ್ಲಿ ಪ್ರತಿಕ್ರಿಯೆ ಸಲ್ಲಿಸುವಂತೆ ಕೇಂದ್ರಕ್ಕೆ ಸೂಚಿಸಿದೆ ಮತ್ತು ಆಗಸ್ಟ್ 5ಕ್ಕೆ ವಿಚಾರಣೆಯನ್ನು ಮುಂದೂಡಿದೆ.

## ಕುಂಭಾಭಿಷೇಕ ಮಹೋತ್ಸವ ಇಂದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದ ಸವಣೂರ ರಸ್ತೆಯಲ್ಲಿರುವ ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಿ ಲೋಕ ಕಲ್ಯಾಣಾರ್ಥವಾಗಿ ಮಾ.22ರಂದು ಬೆಳಿಗ್ಗೆ 10.30ಕ್ಕೆ ಕುಂಭಾಭಿಷೇಕ ಮಹೋತ್ಸವ ಮತ್ತು ಧಾರ್ಮಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಶ್ರೀ ಭೂನೀಳಾ ಸಮೇತ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನ ನಿರ್ಮಾಣಗೊಂಡು 12 ಸಂವತ್ಸರವಾದ ಹಿನ್ನೆಲೆಯಲ್ಲಿ ಕುಂಭಾಭೀಷೇಕ ಮಹಾಮಹೋತ್ಸವ ಹಮ್ಮಿಕೊಳ್ಳಲಾಗಿದೆ. ಕಾರ್ತಿಕೇಯ ಶಾಸ್ತ್ರಿಗಳ ನೇತೃತ್ವದಲ್ಲಿ ಶ್ರೀ ಸೂಕ್ತ, ಪುರುಷಸೂಕ್ತ, ತತ್ವನ್ಯಾಸ, ವಿಷ್ಣು ಸಹಸ್ರನಾಮ, ಕಲಾ, ದೀಕ್ಷಾ ಹೋಮ ಬಳಿಕ ಪೂರ್ಣಾಹುತಿ ಜರುಗಲಿದೆ. ಈ ಅಭೂತಪೂರ್ವ ಧಾರ್ಮಿಕ ಕಾರ್ಯಕ್ರಮದಲ್ಲಿ ಪಟ್ಟಣ ಸೇರಿ ಸುತ್ತಲಿನ ಗ್ರಾಮಗಳ ಭಕ್ತರು ಪಾಲ್ಗೊಳ್ಳಬೇಕೆಂದು ದೇವಸ್ಥಾನ ಕಮಿಟಿ ತಿಳಿಸಿದೆ.

## ಬಿಸಿಲ ಧಗೆಗೆ ಕೆರೆಗಳು ಬರಿದು: ಮೀನುಗಾರರಿಗೂ ತಟ್ಟಿದ ಬರದ ಬಿಸಿ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಗರದಲ್ಲಿ ದಿನ ಕಳೆಯುತ್ತಿದ್ದಂತೆಯೇ ತಾಪಮಾನ ಹೆಚ್ಚುತ್ತೇ ಇದ್ದು, ಬಿಸಿಲ ಧಗೆಗೆ ಜಲಮೂಲಗಳು ಬರಿದಾಗುತ್ತಿವೆ. ನೀರಿನ ಮಟ್ಟ ತೀವ್ರವಾಗಿ ಕುಸಿದಿರುವುದರಿಂದ ಕೆರೆಗಳನ್ನೇ ಅವಲಂಬಿಸಿ ಜೀವನ ನಡೆಸುತ್ತಿರುವ ಮೀನುಗಾರರ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ.

### ಶಹರ ಪೊಲೀಸ್ ಠಾಣೆಯಲ್ಲಿ ಹೋಳಿ ಹಬ್ಬದ ನಿಮಿತ್ತ ಶಾಂತಿ ಸಭೆ

## ಹಬ್ಬ ಶಾಂತ ರೀತಿಯಿಂದ ಜರುಗಲು ಸಹಕರಿಸಿ

■ವಿಜಯಸಾಕ್ಷಿ ಸುದ್ದಿ, ಗದಗ



ಮಾ.25ರಿಂದ ಮಾ.29ರ ವರೆಗೆ ಹೋಳಿ ಹಬ್ಬದ ಪ್ರಯುಕ್ತ ಶಹರದಲ್ಲಿ ಸುಮಾರು 25 ಸ್ಥಳಗಳಲ್ಲಿ ಕಾಮ ರತಿ ಮೂರ್ತಿ ಪ್ರತಿಷ್ಠಾಪನೆ ಮಾಡಲಿದ್ದು, ಹೋಳಿ ಹಬ್ಬದ ಆಚರಣೆ ಕಾಲಕ್ಕೆ ಎಲ್ಲ ಕಾಮ-ರತಿ ಮೂರ್ತಿ ಪ್ರತಿಷ್ಠಾಪನೆ ಮಂಡಳಿಯವರು ಚುನಾವಣೆ ಅಧಿಕಾರಿಗಳು/ ನಗರಸಭೆ/ ಪೊಲೀಸ್ ಇಲಾಖೆಯಿಂದ ಪರವಾನಿಗೆ ಪಡೆದುಕೊಳ್ಳಬೇಕು. ಎಲ್ಲರೂ ಕಾಮ-ರತಿ ಮೂರ್ತಿ ಪ್ರತಿಷ್ಠಾಪನೆ ಸ್ಥಳದಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸಿಕೊಳ್ಳಬೇಕು ಎಂದು ಗದಗ ಶಹರ ಪೊಲೀಸ್ ಠಾಣೆಯ ಪಿಐ ಡಿ.ಬಿ ಪಾಟೀಲ್ ಹೇಳಿದರು.

ಶಹರ ಪೊಲೀಸ್ ಠಾಣೆಯಲ್ಲಿ ಹೋಳಿ ಹಬ್ಬದ ನಿಮಿತ್ತ ಕರೆದಿದ್ದ ಶಾಂತಿ ಸಭೆಯಲ್ಲಿ ಅವರು ಮಾತನಾಡಿದರು.

ಮೆರವಣಿಗೆ ಕಾಲಕ್ಕೆ ದುರ್ನಡತೆ ತೋರುವವರು, ಕ್ಷುಲ್ಲಕ ಕಾರಣಕ್ಕೆ ಜಗಳ ಮಾಡುವವರು ಕಂಡು ಬಂದಲ್ಲಿ ಅಂಥವರ ವಿರುದ್ಧ ಕಾನೂನು ಕ್ರಮ ಕೈಕೊಳ್ಳಲಾಗುವುದು. ಹಬ್ಬ ಶಾಂತ ರೀತಿಯಿಂದ ಜರುಗಲು ಇಲಾಖಾ ವತಿಯಿಂದ ಸೂಕ್ತ ಪೊಲೀಸ್ ಬಂದೋಬಸ್ತ್ ಮಾಡಲಾಗುವುದು.

ರಂಗಪಂಚಮಿ ದಿನದಂದು ಮೆರವಣಿಗೆಯನ್ನು ಬೇಗ ಮುಕ್ತಾಯ ಮಾಡಬೇಕು. ಮೆರವಣಿಗೆ ಮಾರ್ಗದಲ್ಲಿ ಸ್ವಯಂ ಸೇವಕರನ್ನು ನೇಮಕ ಮಾಡಿಕೊಳ್ಳಬೇಕು. ಅಲ್ಲದೇ ಮೆರವಣಿಗೆಯು ಮಂದಿರ/ಚರ್ಚ್/ ಮಸೀದಿಗಳ ಮುಂದೆ ಹಾಯ್ದು ಹೋಗುವಾಗ ಅನ್ಯ ಕೋಮಿನ ಜನರ ಭಾವನೆಗಳಿಗೆ ಧಕ್ಕೆ ಬರುವಂತೆ ಘೋಷಣೆ ಹಾಗೂ ಹಾಡುಗಳನ್ನು ಹಾಡಬಾರದು. ಹಬ್ಬ ಆಚರಣೆ ಕಾಲಕ್ಕೆ ಶಾಂತಿ ಸುವ್ಯವಸ್ಥೆ ಹಾಳು ಮಾಡುವವರು ಕಂಡು ಬಂದಲ್ಲಿ ಅಂಥವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಕೊಳ್ಳಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಶಹರ ಪೊಲೀಸ್ ಠಾಣೆಯ ಪಿಎಸ್ಐ ಎಚ್.ಕೆ. ಪಾಟೀಲ್, ನಗರ ಸಭೆಯ ಎ.ಇ.ಇ ಆನಂದ ಬದಿ, ಅಬಕಾರಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಆಶಾರಾಣಿ ಗುಡದಾರ, ಠಾಣೆಯ ಸಿಬ್ಬಂದಿಗಳು, ವಿ.ಎಸ್. ಭಿಕ್ಷಾವತಿಮಠ, ಎನ್.ಜಿ. ಭರಮಗೌಡರ, ಎ.ಆರ್. ಕವಲೂರ ಹಾಜರಿದ್ದರು.

ಮುಖಂಡರಾದ ರಾಮಣ್ಣ ಫಲದೊಡ್ಡಿ, ಎಸ್.ಎನ್. ಬಳ್ಳಾರಿ, ಅಕ್ಬರಸಾಬ ಬಬರ್ಚಿ, ಅಜ್ಜಣ್ಣ ಮಲ್ಲಾಡದ್, ಫಕ್ಕಿರಪ್ಪ ಹೇಬಸೂರ, ಸುಧೀರ ಕಾಟಗೇರ, ವಿಜಯ ಕಲ್ಮನಿ, ರಾಘವೇಂದ್ರ ಪರಾಪೂರ, ಗಣೇಶ ಹುಬ್ಬಳ್ಳಿ, ಬಸಣ್ಣ ಪಡಗದ, ಹುಡಚಪ್ಪ ಹಳ್ಳಿಕೇರಿ, ಅಪ್ಪುರಾಜ ಹಾಗೂ ಕಾಮ ರತಿ-ಪ್ರತಿಷ್ಠಾನೆ ಮಂಡಳಿಯ ಪದಾಧಿಕಾರಿಗಳು ಭಾಗವಹಿಸಿದ್ದರು. ಹನುಮಂತ ಯಡಿಯಾಪೂರ ವಂದಿಸಿದರು.

ಕಾಮ-ರತಿ ಪ್ರತಿಷ್ಠಾಪನೆ ಮಾಡಿದ ಸ್ಥಳದಲ್ಲಿ ದಿನದ 24*7 ಗಂಟೆ ಕಾಲ ಸ್ವಯಂ ಸೇವಕರು ಇರಬೇಕು. ರಸ್ತೆ ಮೇಲೆ ನಿಂತು ಸಾರ್ವಜನಿಕರಿಂದ ಹಣ ವಸೂಲಿ ಮಾಡಬಾರದು. ಮತ್ತು ರಸ್ತೆ ಮೇಲೆ ಕಾಮ ರತಿ ಮೂರ್ತಿ ದಹನ ಮಾಡಬಾರದು, ಒತ್ತಾಯ ಪೂರ್ವಕವಾಗಿ ಯಾರಿಗೂ ಕೂಡಾ ಬಣ್ಣ ಎರಚಬಾರದು. ಹಬ್ಬದ ಆಚರಣೆ ಕಾಲಕ್ಕೆ ಬೈಕನಲ್ಲಿಯ ಪೆಟ್ರೋಲ್/ಬೆಲೆ ಬಾಳುವ ಕಟ್ಟಿಗೆ ಸಾಮಾನುಗಳನ್ನು/ಇತರೆ ವಸ್ತುಗಳನ್ನು ಹಬ್ಬದ ನೆಪದಲ್ಲಿ ಕಳವು ಮಾಡಬಾರದು. ಸದರ ಹಬ್ಬವನ್ನು ಹಿಂದೂ-ಮುಸ್ಲಿಂ ಜನರು ಕೂಡಿಕೊಂಡು ಶಾಂತ ರೀತಿಯಿಂದ ಆಚರಣೆ ಮಾಡಬೇಕು. ವಿದ್ಯಾರ್ಥಿಗಳ ವಾರ್ಷಿಕ ಪರೀಕ್ಷೆಗಳು ಇರುವುದರಿಂದ ಹಲಗೆಯನ್ನು ರಾತ್ರಿ 10 ಗಂಟೆಯ ನಂತರ ಬಾರಿಸಬಾರದು ಎಂದು ಡಿ.ಬಿ ಪಾಟೀಲ್ ಸೂಚಿಸಿದರು.

## ಎಚ್‌ಡಿಕೆ ಆರೋಗ್ಯ ಸುಧಾರಣೆಗೆ ಪ್ರಾರ್ಥಿಸಿ ಪೂಜೆ



■ವಿಜಯಸಾಕ್ಷಿ ಸುದ್ದಿ, ಗದಗ


ನಾಡು ಕಂಡ ಜನಪ್ರಿಯ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರು ಚೆನ್ನೈನ ಆಸ್ಪತ್ರೆಗೆ ದಾಖಲಾಗಿದ್ದು, ಅವರ ಶಸ್ತ್ರಚಿಕಿತ್ಸೆ ಯಶಸ್ವಿಯಾಗಲೆಂದು ಜೆಡಿಎಸ್ ಪಕ್ಷದ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ನೇತೃತ್ವದಲ್ಲಿ ಗದುಗಿನ ವೀರೇಶ್ವರ ಪುಣ್ಯಾಶ್ರಮದಲ್ಲಿ ಗುರುವಾರ ಮೃತ್ಯುಂಜಯ ಹೋಮ ಹಾಗೂ ಗಣಹೋಮ ನೆರವೇರಿಸಲಾಯಿತು.

ಈಗಿರುವ ಏಕೈಕ ಕನ್ನಡ ನಾಡಿನ ಪ್ರೀತಿಯ ಅಣ್ಣ ಎಂದರೆ ಅದು ಕುಮಾರಣ್ಣ ಮಾತ್ರ. ಆರು ಕೋಟಿ ಕನ್ನಡಿಗರು ಪ್ರೀತಿಯಿಂದ ಅಣ್ಣಾ ಎಂದು ಕರೆಯುತ್ತಿದ್ದಾರೆ ಎಂದು ಜೆಡಿಎಸ್ ಪಕ್ಷದ ರಾಜ್ಯದ ವಕ್ತಾರ ವೆಂಕನಗೌಡ ಗೋವಿಂದಗೌಡ್ರು ಅಭಿಪ್ರಾಯಪಟ್ಟರು.

ಪೂಜಾ ಕಾರ್ಯಕ್ರಮದಲ್ಲಿ ಬಸವರಾಜ್ ಅಪ್ಪಣ್ಣವರ್, ಜಿ.ಕೆ. ಹಿರೇಮಠ್ (ಕೊಳ್ಳಿಮಠ), ದೇವಪ್ಪ ಮಲ್ಲಸಮುದ್ರ, ಆನಂದ್ ಹಂಡಿ, ಪ್ರಫುಲ್ ಪುಣೇಕರ, ಅಮೀನ್ ಕಾಗದಗಾರ, ಅಶೋಕ್ ತ್ಯಾಮನವರ್, ಹನುಮಂತಪ್ಪ ಕಂಚಗಾರ, ಮೌಲಹುಸೇನ್ ತಾಂಬೂಲಿ ಸೇರಿದಂತೆ ಪಕ್ಷದ ಪ್ರಮುಖರು ಇದ್ದರು. ಈ ಸಂದರ್ಭದಲ್ಲಿ ಪುಣ್ಯಾಶ್ರಮದ ನೂರಾರು ವಿದ್ಯಾರ್ಥಿಗಳು ಕುಮಾರಸ್ವಾಮಿಯವರ ಆರೋಗ್ಯಕ್ಕಾಗಿ ವಚನ ಪಠಣಗಳನ್ನು ಮಾಡಿದರು.

## ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ




ತಾಲೂಕಿನ ನಾಗೇಂದ್ರಗಡ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟದಿಂದಾಗಿ ಬಡ ಕುಟುಂಬಗಳ ನೆಮ್ಮದಿ ಹಾಳಾಗುತ್ತಿದ್ದು, ಅಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿ ಅಕ್ರಮ ಸಾರಾಯಿ ಮಾರಾಟಕ್ಕೆ ಬ್ರೇಕ್ ಹಾಕುವಂತೆ ಗ್ರಾಮಸ್ಥರು ತಹಸೀಲ್ದಾರ್ ಕಚೇರಿ ಮೂಲಕ ಅಬಕಾರಿ ಇಲಾಖೆಗೆ ಗುರುವಾರ ಮನವಿ ಸಲ್ಲಿಸಿದರು.

ಸಾಮಾಜಿಕ ಹೋರಾಟಗಾರ ಫಕ್ರುಸಾಬ ಕೊತವಾಲೆ ಮಾತನಾಡಿ, ಬರಗಾಲದಿಂದಾಗಿ ಬೆಳೆಯಿಲ್ಲದೆ, ಹಳ್ಳಿಯಲ್ಲಿ ಕುಡಿಯುವ ನೀರು, ಹೊತ್ತಿನ ಊಟಕ್ಕೂ ತಾತ್ವರ ಎದುರಾಗಿದೆ. ಆದರೆ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟಕ್ಕೆ ಮಾತ್ರ ಯಾವುದೇ ಕಡಿವಾಣ ಇಲ್ಲವಾಗಿದ್ದು, ಕೆಲವರು ಇದನ್ನೇ ನಿತ್ಯದ ದಂಧೆ ಮಾಡಿಕೊಂಡಿದ್ದಾರೆ. ಹಳ್ಳಿಗಳಲ್ಲಿ ಯುವಕರು ಸಾರಾಯಿ ಸೇವನೆಯ ದಾಸರಾಗುತ್ತಿದ್ದಾರೆ.

ಸಂಬಂಧಿಸಿದ ಅಧಿಕಾರಿಗಳು ಭೇಟಿ ನೀಡಿ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದು ಒತ್ತಾಯಿಸಿದ ಅವರು, ಕೂಲಿ ಮಾಡಿ ಹೊಟ್ಟೆ ಹೊರೆದುಕೊಳ್ಳುವ ಜನರನ್ನು ಮದ್ಯ ವ್ಯಸನಿಗಳನ್ನಾಗಿ ಮಾಡಿ ತಾವು ಮಾತ್ರ ಜೇಬು ತುಂಬಿಸಿಕೊಳ್ಳುತ್ತಿರುವ ಅಕ್ರಮ ಸಾರಾಯಿ ಅಂಗಡಿಗಳ ಮೇಲೆ ಕೂಡಲೇ ಅಬಕಾರಿ ಇಲಾಖೆಯ ಅಧಿಕಾರಿಗಳು ಕ್ರಮ ಕೈಗೊಳ್ಳುವಂತೆ ಗ್ರಾಮಸ್ಥರು ಮನವಿ ಸಲ್ಲಿಸಿದರು.

## ಮೋದಿ ಗೆಲುವಿಗೆ ಬೈಕ್‌ನಲ್ಲಿ ಅಯೋಧ್ಯೆಗೆ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ



ಲೋಕಸಭಾ ಚುನಾವಣೆ ಕಾವು ಪಡೆಯುತ್ತಿರುವುದು ಒಂದೆಡೆಯಾದರೆ, ಮೋದಿ ಅಭಿಮಾನಿ, ಶ್ರೀರಾಮುಲು ಆಪ್ತ ಹಾಗೂ ರೋಣ ಮತಕ್ಷೇತ್ರದ ಬಿಜೆಪಿ ಮುಖಂಡ ಅಂದಪ್ಪ ಸಂಕನೂರ ಕೇಂದ್ರದಲ್ಲಿ ಮತ್ತೊಮ್ಮೆ ಬಿಜೆಪಿ ಅಧಿಕಾರಕ್ಕೆ ಬರಲಿ ಎಂದು ಅಯೋಧ್ಯೆಯ ಶ್ರೀರಾಮ ಮಂದಿರಕ್ಕೆ ಬೈಕ್ ಮೂಲಕ ತೆರಳಿದ್ದಾರೆ.

ಲೋಕಸಭಾ ಚುನಾವಣೆಯಲ್ಲಿ ಬಳ್ಳಾರಿಯಲ್ಲಿ ಶ್ರೀರಾಮುಲು, ಹಾವೇರಿ-ಗದಗ ಲೋಕಸಭಾ ಬಸವರಾಜ ಬೊಮ್ಮಾಯಿ ಸೇರಿ ರಾಜ್ಯದ ಎಲ್ಲ ಕ್ಷೇತ್ರಗಳಲ್ಲಿ ಬಿಜೆಪಿ ಗೆಲ್ಲಲಿ, ಮೋದಿ ಮತ್ತೊಮ್ಮೆ ಪ್ರಧಾನಿಯಾಗಲಿ ಎಂದು ಶ್ರೀರಾಮನಿಗೆ ವಿಶೇಷ ಪೂಜೆ ಮಾಡಿಸಲು ಪಟ್ಟಣದಿಂದ ಬಿಜಾಪೂರ, ಸೋಲ್ಹಾಪೂರ, ನಾಗ್ಪುರ ಮೂಲಕ ಅಯೋಧ್ಯೆಗೆ ಪ್ರತಿದಿನ 400-500 ಕಿಮಿ ಪ್ರಯಾಣದ ಸಿದ್ಧತೆಯೊಂದಿಗೆ ಸಂಗಡಿಗ ಕಿರಣ ಬಂಡೆಹಾಳ ಅವರೊಂದಿಗೆ ತೆರಳಿದರು.

### ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಅಂತಾರಾಷ್ಟ್ರಿಯ ಮಹಿಳಾ ದಿನಾಚರಣೆ

## ಮಹಿಳೆ ಸಮಾಜದ ಕಣ್ಣು




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಯಶಸ್ವಿ ಪುರುಷನ ಹಿಂದೆ ಮಹಿಳೆಯ ಶ್ರಮ ಅಡಗಿರುತ್ತದೆ. ಮಹಿಳೆಯರಿಗೆ ಅವಕಾಶಗಳು ದೊರೆತಲ್ಲಿ ಸಮಾಜದ ಶ್ರೇಯೋಭಿವೃದ್ಧಿಗಾಗಿ ನಿಷ್ಠೆಯಿಂದ ಕಾರ್ಯ ನಿರ್ವಹಿಸುತ್ತಾರೆ. ಮಹಿಳೆಯರಲ್ಲಿ ಸಮಾಜದ ಚಿಂತನೆ ಅಡಗಿರುತ್ತದೆ ಎಂದು ಹಾಸ್ಯ ಸಾಹಿತಿ ಅರುಣ ಕುಲಕರ್ಣಿ ಹೇಳಿದರು.

ಅವರು ಪಟ್ಟಣದ ಈಶ್ವರೀಯ ವಿಶ್ವವಿದ್ಯಾಲಯದ ಸಭಾಭವನದಲ್ಲಿ ಪಟ್ಟಣದ ಸೃಷ್ಟಿ, ದೃಷ್ಟಿ ಪರಿವಾರ ಹಾಗೂ ಈಶ್ವರೀಯ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಗುರುವಾರ ನಡೆದ ಅಂತಾರಾಷ್ಟ್ರಿಯ ಮಹಿಳಾ ದಿನಾಚರಣೆಯಲ್ಲಿ ಮಾತನಾಡಿದರು.

ನಮ್ಮ ದಿನನಿತ್ಯದ ಬದುಕಿನಲ್ಲಿ ನಡೆಯುವ ಅನೇಕ ಘಟನೆಗಳು ಹಾಸ್ಯವನ್ನು ಹುಟ್ಟು ಹಾಕುತ್ತವೆ. ಮತ್ತೊಬ್ಬರ ಜೀವನದ ಜೊತೆ ಟೀಕೆ ಮಾಡುವಂತೆ, ನೋವು ನೀಡುವಂತೆ ಹಾಸ್ಯ ಮಾಡುವದು ಅಪಹಾಸ್ಯವಾಗುತ್ತದೆ ಎಂದರು.


ಹಿರಿಯ ಸಾಹಿತಿ ಹಾಗೂ ನಿವೃತ್ತ ಶಿಕ್ಷಕಿ ಲಲಿತಕ್ಕ ಕೆರಿಮನಿ ಮಾತನಾಡಿ, ಸ್ತ್ರೀಯನ್ನು ಅಗೌರವಿಸುವದು ನಮ್ಮ ಸಂಸ್ಕೃತಿಯಲ್ಲ. ದೇವತಾ ಶಕ್ತಿ ಅಡಗಿಸಿಕೊಂಡಿರುವ ಮಹಿಳೆಯನ್ನು ಗೌರವದಿಂದ ನೋಡಿಕೊಳ್ಳುವದು ಸಮಾಜದ ಪ್ರತಿಯೊಬ್ಬರ ಕರ್ತವ್ಯವಾಗಿದೆ. ಇಂದು ಮಹಿಳೆಯರು ಪ್ರತಿಯೊಂದು ರಂಗದಲ್ಲೂ ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದು, ಹೆಚ್ಚಿನ ಅವಕಾಶಗಳನ್ನು ನೀಡಿದರೆ ಸ್ತ್ರೀಶಕ್ತಿಗೆ ಮತ್ತಷ್ಟು ಬಲ ನೀಡಿದಂತಾಗುತ್ತದೆ. ಹೆಣ್ಣು ಈ ಜಗತ್ತಿನ ಕಣ್ಣು. ಸಹನೆ, ಜಾಣ್ಮೆ, ಚಾಣಾಕ್ಷತನ, ಕರುಣೆ, ವಾತ್ಸಲ್ಯ ಎಲ್ಲವನ್ನು ಹೊಂದಿರುವಳು ಹೆಣ್ಣು ಮಾತ್ರ ಎಂದು ಹೇಳಿದರು.

ಸಭೆಯ ಅಧ್ಯಕ್ಷತೆಯನ್ನು ಬಿ.ಕೆ. ನಾಗಲಾಂಬಿಕಾ ವಹಿಸಿದ್ದರು. ಹಿರಿಯರಾದ ಸುವರ್ಣಾಬಾಯಿ ಬಹದ್ದೂರದೇಸಾಯಿ, ರೋಹಿಣಿ ಬಾಯಿ ಬಹದ್ದೂರ ದೇಸಾಯಿ, ಸರಸ್ವತಿ ಅಗಡಿ, ಶಾರದಾ ಮಹಾಂತಶೆಟ್ಟರ, ಮಂಜುಳಾ ಸತ್ಯಪ್ಪನವರ, ಕಾವ್ಯಾ ದೇಸಾಯಿ, ಮುಂತಾದವರಿದ್ದರು. ಬಿ.ಎಸ್. ಬಾಳೇಶ್ವರಮಠ ಸ್ವಾಗತಿಸಿದರು, ಜಯಶ್ರೀ ಮೆಳ್ಳಿಗೇರಿ, ಶೈಲಾ ಆದಿ ನಿರೂಪಿಸಿದರು.

ಪರಿವಾರದ ಸಂಸ್ಥಾಪಕ ಅಧ್ಯಕ್ಷೆ ಸರೋಜಾ ಬನ್ನೂರ ಮಾತನಾಡಿ, ಎಲ್ಲವನ್ನು ಸಾಧಿಸುವ ಶಕ್ತಿಯನ್ನು ಮಹಿಳೆ ಪಡೆದಿದ್ದಾಳೆ. ಅಂತಹ ಮಹಿಳೆಗೆ ಧೈರ್ಯ ತುಂಬಿ ಪ್ರೋತ್ಸಾಹ ನೀಡುವ ಕಾರ್ಯವನ್ನು ಸಮಾಜ ಮಾಡಬೇಕಾಗಿದೆ. ನಾವೆಲ್ಲರೂ ಇಲ್ಲಿ ಒಂದೇ ತಾಯಿಯ ಮಕ್ಕಳಿದ್ದಂತೆ. ಬಡವ, ಬಲ್ಲಿದ, ಮೇಲು-ಕೀಳು ಭಾವನೆ ಬೇಡ ಎಂದ ಅವರು, ಇಂದು ಪರಿವಾರದ ವತಿಯಿಂದ ಎಲೆಮರೆಯ ಕಾಯಿಯಂತೆ ಇರುವ ಸಣ್ಣ ಸಣ್ಣ ದುಡಿಮೆಯಿಂದ ಜೀವನ ಸಾಗಿಸುತ್ತಿರುವ ಅನೇಕ ಮಹಿಳೆಯರು ಈ ಸಮಾಜದಲ್ಲಿದ್ದು, ಅವರನ್ನು ಗೌರವಿಸುವ ಕಾರ್ಯವನ್ನು ಮಾಡಲಾಗಿದೆ ಎಂದರು.

## ಸೌಹಾರ್ದತೆಯಿಂದ ಹೋಳಿ ಆಚರಿಸಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ



ಹೋಳಿ ಹಬ್ಬವನ್ನು ಶಾಂತಿ, ಸೌಹಾರ್ದತೆಯಿಂದ ಆಚರಿಸಬೇಕು ಎಂದು ಪಟ್ಟಣದ ಪೊಲೀಸ್ ಠಾಣೆಯ ಪಿಎಸ್ಐ ಲಕ್ಷ್ಮಣ ಗೌಡಿ ಹೇಳಿದರು.

ಅವರು ಪಟ್ಟಣದ ಪೊಲೀಸ್ ಠಾಣೆಯಲ್ಲಿ ಗುರುವಾರ ಕರೆದಿದ್ದ ಹೋಳಿ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಶಾಂತಿ-ಸುವ್ಯವಸ್ಥೆ ಕಾಪಾಡಲು ಸಾರ್ವಜನಿಕರ ಸಹಕಾರ ಅಗತ್ಯವಾಗಿದೆ. ಯಾವುದೇ ಅಹಿತರಕ ಘಟನೆಗಳಿಗೆ ಅವಕಾಶ ನೀಡಬೇಡಿ. ಚುನಾವಣೆ ನೀತಿ ಸಂಹಿತೆ, ಎಸ್ಸೆಸ್ಸೆಲ್ಸಿ ಪರೀಕ್ಷೆ ಹಾಗೂ ರಂಜಾನ್ ಹಬ್ಬ ಒಂದೇ ಸಮಯದಲ್ಲಿ ಬಂದಿರುವುದರಿಂದ ಪರಸ್ಪರ ಕೋಮ ಸೌಹಾರ್ದತೆ ಕಾಪಾಡಿಕೊಳ್ಳಬೇಕು ಎಂದರು.

ಎಎಸ್ಐ ಎಚ್.ಬಿ. ಪಾಟೀಲ್ ಮಾತನಾಡಿ, ಪಟ್ಟಣದಲ್ಲಿ ಮಾರ್ಚ್ 25ರಂದು ಕಾಮ ಮೂರ್ತಿ ಪ್ರತಿಷ್ಠಾಪನೆಯಾಗಿ, ಮಾರ್ಚ್ 26ರಂದು ಬಣ್ಣದೋಕುಳಿ ಜರುಗಲಿದೆ. ಚರ್ಮಕ್ಕೆ ಹಾನಿಕಾರವಲ್ಲದ ನೈಸರ್ಗಿಕ ಬಣ್ಣವನ್ನು ಮಾತ್ರ ಉಪಯೋಗಿಸಬೇಕು. ಎಸ್ಸೆಸ್ಸೆಲ್ಸಿ ಪರೀಕ್ಷೆ ಇರುವುದರಿಂದ ಮಕ್ಕಳ ಮೇಲೆ ಬಣ್ಣವನ್ನು ಎರಚಬೇಡಿ, ಎಲ್ಲರೂ ಶಾಂತಿ-ಸೌಹಾರ್ದತೆಯಿಂದ ಹೋಳಿ ಹಬ್ಬವನ್ನು ಆಚರಣೆ ಮಾಡಬೇಕು. ಪೊಲೀಸ್ ಇಲಾಖೆ ನಿಮ್ಮೊಂದಿಗೆ ಸದಾ ಇರುತ್ತದೆ ಎಂದರು.

ಪ.ಪಂ ಮುಖ್ಯಾಧಿಕಾರಿ ಮಂಜುನಾಥ ಗುಳೇದ, ಪ.ಪಂ ಸದಸ್ಯ ನಾಗರಾಜ ದೇಶಪಾಂಡೆ, ರಮೇಶ ಮ್ಯಾಗೇರಿ, ಪರಶುರಾಮ ದೊಡ್ಡಮನಿ, ಭೀಮಣ್ಣ ಕೋಳಿ, ವಿರೂಪಾಕ್ಷಪ್ಪ ಮಡಿವಾಳರ, ತೀರಕಪ್ಪ ನೀರಜಿಡ್ಡಿ, ಪೊಲೀಸ್ ಸಿಬ್ಬಂದಿಗಳಾದ ಸುನೀಲ ಉಗಾರೆ, ರವಿ ವಾಲ್ಮೀಕಿ, ಬಂಡೆಪ್ಪ ಸಾವಿರಕುರಿ, ಮಂಜುನಾಥ ಲಮಾಣಿ, ಬಸವರಾಜ ಕೋಳಿವಾಡ, ಪ್ರಭು ಕೊಡಬಾಳಮಠ, ನಿಯಾಜ ದಳವಾಯಿ ಹಾಗೂ ಯುವಕ ಮಂಡಳಿಯ ಸದಸ್ಯರು ಇದ್ದರು.

## ಇವಿಎಂ, ವಿ.ವಿ. ಪ್ಯಾಟ್ಸ್‌ಗಳ ರ‍್ಯಾಂಡಮೈಜೇಷನ್

■ವಿಜಯಸಾಕ್ಷಿ ಸುದ್ದಿ, ಧಾರವಾಡ



ಧಾರವಾಡ ಲೋಕಸಭೆ ಸಾರ್ವತ್ರಿಕ ಚುನಾವಣೆ 2024ಕ್ಕೆ ಸಂಬಂದಿಸಿದಂತೆ ಇ.ವಿ.ಎಂ. ಮತ್ತು ವಿ.ವಿ.ಪ್ಯಾಟ್ಸ್‌ಗಳ 1ನೇ ಹಂತದ ರ‍್ಯಾಂಡಮೈಜೇಷನ್ ಕಾರ್ಯವನ್ನು ತಂತ್ರಾಂಶದ ಮೂಲಕ ರಾಷ್ಟ್ರೀಯ ರಾಜಕೀಯ ಪಕ್ಷಗಳ ಹಾಗೂ ಇತರ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಮಾರ್ಚ್ 21ರ ಸಂಜೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳಾದ ದಿವ್ಯ ಪ್ರಭು ಅವರು ಜರುಗಿಸಿದರು.

ಸಭೆಯಲ್ಲಿ ಭಾಗವಹಿಸಿದ್ದ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಜಿಲ್ಲಾ ಚುನಾವಣಾಧಿಕಾರಿಗಳು ಇವಿಎಂ, ವಿ.ವಿ ಪ್ಯಾಟ್ಸ್‌ಗಳ ರ‍್ಯಾಂಡಮೈಜೇಷನ್ ಕುರಿತು, ಮತದಾರ ಪಟ್ಟಿ, ಮತಗಟ್ಟೆಗಳ ಕುರಿತು, ಪ್ರಚಾರ ಸಂದರ್ಭದಲ್ಲಿ ಅನುಸರಿಸುವ ನಿಯಮಗಳ ಕುರಿತು ವಿವರಿಸಿದರು.

ಸಭೆಯಲ್ಲಿ ಭಾರತೀಯ ಜನತಾ ಪಕ್ಷದ ಆರ್.ಎಂ. ಕಲ್ಯಾಣಶೆಟ್ಟಿ, ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಪ್ರಕಾಶ ಹಳಿಯಾಳ, ಜಾತ್ಯಾತೀತ ಜನತಾದಳ ಪಕ್ಷದ ಗುರುರಾಜ ಹುಣಸಿಮರದ ಮತ್ತು ದೇವರಾಜ ಕಂಬಳಿ, ಆಮ್ ಆದ್ಮಿ ಪಕ್ಷದ ಅವಿನಾಶ, ಬಹುಜನ ಸಮಾಜವಾದಿ ಪಕ್ಷ ಶೋಭಾ ಬಳ್ಳಾರಿ ಸೇರಿದಂತೆ ವಿವಿಧ ರಾಜಕೀಯ ಪಕ್ಷ ಪ್ರತಿನಿಧಿಗಳು, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ, ಧಾರವಾಡ ಲೋಕಸಭಾ ಮತಕ್ಷೇತ್ರ ವ್ಯಾಪ್ತಿಯ ಎಲ್ಲ ಸಹಾಯಕ ಚುನಾವಣಾಧಿಕಾರಿಗಳು, ವಿವಿಧ ನೋಡಲ್ ಅಧಿಕಾರಿಗಳು ಭಾಗವಹಿಸಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka